MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 04 | ಸಂಚಿಕೆ: 303 | ಶುಕ್ರವಾರ : 19-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 303 | FRIDAY : 19-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00


## ಎಲ್ಲ ಕ್ಯಾಂಪ್‌ಗಳಲ್ಲಿ ಮಹಿಳಾ ಸಭೆ ನಡೆಸಲು ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ಸೂಚನೆ




ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.18**–ಸಿಂಧನೂರ, ಮಸ್ಕಿ ನಗರ ಸೇರಿದಂತೆ ತಾಲೂಕು ವ್ಯಾಪ್ತಿಯ ಎಲ್ಲ ಕ್ಯಾಂಪಗಳಲ್ಲಿ, ಹಳ್ಳಿಗಳಲ್ಲಿ ಅಲೆಮಾರಿ, ಅರೆ ಅಲೆಮಾರಿ ಸೇರಿದಂತೆ ಎಲ್ಲ ಮಹಿಳೆಯರ ಹಾಗೂ ಮಾಜಿ ದೇವದಾಸಿ ಮಹಿಳೆಯರನ್ನು ಸೇರಿಸಿ ಮಹಿಳಾ ಗ್ರಾಮ ಸಭೆಗಳನ್ನು ನಡೆಸಬೇಕು. ಆ ಸಭೆಗಳಲ್ಲಿ ಮಹಿಳೆಯರ ಸಮಸ್ಯೆಗಳನ್ನು ಚರ್ಚಿಸಿ, ಪರಿಹಾರ ಕ್ರಮಗಳ ಜರುಗಿಸಿದ ಬಗ್ಗೆ ಮಹಿಳಾ ಆಯೋಗಕ್ಕೆ ವರದಿ ಸಲ್ಲಿಸಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ಅವರು ಹೇಳಿದರು.

ಸಿಂಧನೂರ ನಗರದ ಸುಕ್ಕಲಪೇಟೆ ರಸ್ತೆಯಲ್ಲಿರುವ ಟೌನ್ ಹಾಲದಲ್ಲಿ ಸಿಂದೋಳ ಸಮುದಾಯದ ಅಲೆಮಾರಿ ಮಹಿಳೆಯರು ಮತ್ತು ದೇವದಾಸಿ ಮಹಿಳೆಯರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಿಂಧನೂರ ನಗರ ಸೇರಿದಂತೆ ಸಿಂಧನೂರ, ಮಸ್ಕಿ, ಮಾನವಿ ತಾಲೂಕುಗಳ ವ್ಯಾಪ್ತಿಯಲ್ಲಿನ ಅನೇಕ ಗ್ರಾಮಗಳು, ಕ್ಯಾಂಪಗಳಲ್ಲಿನ ಅನೇಕ ವಯೋವೃದ್ಧೆಯರು ಈಗಲು ಸಹ ಮಾಸಿಕ ವೃದ್ಧ್ಯಾಪ್ಯದ ಹಳೆಯ ವೇತನ ಪಡೆಯುತ್ತಿದ್ದು, ಅವರಿಗೆ ಪರಿಷ್ಕೃತ ಈಗಿನ ವೇತನ ಸಿಗುವಂತೆ ಕ್ರಮವಹಿಸಬೇಕು ಎಂದು ಸೂಚನೆ ನೀಡಿದರು.

ದೇವದಾಸಿಯರಿಂದ ಮನವಿ: ಬಹು ವರ್ಷಗಳಿಂದ ನಮಗೆ ಮನೆ ಇಲ್ಲ. ನಿವೇಶನ ಇಲ್ಲ ಎಂದು ಸಿಂಧನೂರ ನಗರದ ಸ್ಥಳೀಯ ಮತ್ತು ಸುತ್ತಲಿನ ಅನೇಕ ಕ್ಯಾಂಪಗಳಲ್ಲಿನ ಮಾಜಿ ದೇವದಾಸಿ ಮಹಿಳೆಯರು ಕಾರ್ಯಕ್ರಮದಲ್ಲಿ ಅಧ್ಯಕ್ಷರಿಗೆ ಮನವಿ ಸಲ್ಲಿಸಿದರು. ಈ ವೇಳೆ ಅಧ್ಯಕ್ಷರು, ವೇದಿಕೆಗೆ ನಗರಸಭೆ ಆಯುಕ್ತರನ್ನು ಕರೆದು ಮಾಜಿ ದೇವದಾಸಿ ಮಹಿಳೆಯರ ಸಮಸ್ಯೆಗಳ ಬಗ್ಗೆ ಚರ್ಚಿಸಿದರು.

ಸಿಂಧನೂರ ನಗರಸಭೆ **(2ನೇಪುಟಕ್ಕೆ)**

## ಮಹಿಳಾ ಸಮುದಾಯದ ನೋವಿಗೆ ಮಿಡಿದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.18**– ರಾಯಚೂರ ಪ್ರವಾಸದಲ್ಲಿರುವ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ಅವರು ಮೊದಲ ದಿನದ ಪ್ರವಾಸದ ನಾನಾ ಕಾರ್ಯಕ್ರಮಗಳ ಮಧ್ಯೆ ಮಹಿಳೆಯರ ನೋವಿಗೆ ಆತ್ಮೀಯ ಸ್ಪಂದನೆ ನೀಡಿದರು.

ಬೆಳಗ್ಗೆ ಕಾಲೇಜೊಂದರಲ್ಲಿ ಸಂವಾದ ನಡೆಸಿ, ನಂತರ ನಗರದ ಎಂಸಿಎಚ್ ಆಸ್ಪತ್ರೆಗೆ ಹೊರಡುವಾಗ ದಾರಿ ಮಧ್ಯೆ ವಾಹನ ನಿಲ್ಲಿಸಿ, ಶಕ್ತಿನಗರಕ್ಕೆ ಹೊರಡುವ ರಸ್ತೆ ಬದಿಯಲ್ಲಿ ಕುಳಿತಿದ್ದ ವಯೋವೃದ್ದೆ ಬಳಿ ತೆರಳಿ ಅವರ ಯೋಗಕ್ಷೇಮ ವಿಚಾರಿಸಿದರು. 'ನನಗೆ ಹಲ್ಲು ನೋವು ಇದೆ, ಕಣ್ಣು ಕಾಣಿಸುತ್ತಿಲ್ಲ' ಎಂದು ಅಜ್ಜಿಯು ತಿಳಿಸಿದರು. 'ನಾನು ವೈದ್ಯೆ ಸಹ ಇದ್ದೀನಿ. ನನಗೆ ತಿಳಿಯುತ್ತದೆ' ಎಂದು ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರು ಆ ವಯೊವೃದ್ಧೆಯ ಕಣ್ಣು, ಹಲ್ಲುಗಳ ಪರೀಕ್ಷಿಸಿದರು. 'ನಿನಗೆ ಆಸ್ಪತ್ರೆಗೆ ದಾಖಲಿಸುತ್ತೇನೆ' ಎಂದು ಅವಳಿಗೆ ಎಳೆನೀರು ನೀಡಿ, ತಾವು ಸಹ ಎಳೆನೀರು ಸೇವಿಸಿ ಆಸ್ಪತ್ರೆಯತ್ತ ಸಾಗಿದರು.

**ಸಖಿ ಸೆಂಟರನಲ್ಲಿ ಸ್ಪಂದನೆ:** ಎಂಸಿಎಚ್ ಆಸ್ಪತ್ರೆಯಿಂದ ಸಖಿ ಒನ್ ಸ್ಟಾಪ್ ಸೆಂಟರಗೆ ಆಗಮಿಸಿ ಪರಿಶೀಲನೆ ನಡೆಸುವ



ವೇಳೆ, ರಾಯಚೂರ ಜಿಲ್ಲೆಯ ಹೊಸೂರ ಗ್ರಾಮದ ಸಂಗೀತಾ ಎನ್ನುವ ಮಹಿಳೆಯೊಬ್ಬರು ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರ ಬಳಿ ಬಂದು, 'ನನ್ನ ಪತಿಯಿಂದ ನನಗೆ ಮೋಸವಾಗಿದೆ.. ನನಗೆ ನ್ಯಾಯ ಕೊಡಿಸಿ' ಎಂದು ಕಣ್ಣೀರು ಹಾಕಿದರು. ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರು, ಅವರ ಕಣ್ಣೀರು ಒರೆಯಿಸಿ, ಅಪ್ಪಿಕೊಂಡು ಸಾಂತ್ವನ ಹೇಳಿದರು. ಸಂಗೀತಾ ಅವರ ಸಂಪರ್ಕ ಸಂಖ್ಯೆ ಪಡೆದುಕೊಂಡರು.

**ರಿಮ್ಸನಲ್ಲಿ ಸ್ಪಂದನೆ:** ಸಖಿ ಒನ್ ಸ್ಟಾಪ್ ಸೆಂಟರನಿಂದ ರಿಮ್ಸ್ ಆಸ್ಪತ್ರೆಗೆ ತೆರಳಿ ವಿವಿಧ ವಾರ್ಡಗಳ ಪ್ರವೇಶಿಸಿ ಪರಿಶೀಲನೆ ನಡೆಸುವ ವೇಳೆಯಲ್ಲಿ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರು ರೋಗಿ ಸಂಬಂಧಿಕರ **(2ನೇಪುಟಕ್ಕೆ)**

## ನವೀಕರಣಗೊಂಡ ರಾಯಚೂರು ನಗರ ಕೇಂದ್ರ ಗ್ರಂಥಾಲಯ: ಸಚಿವರಿಂದ ಚಾಲನೆ



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.18**– ರಾಯಚೂರ ಜಿಲ್ಲಾಡಳಿತ ಮತ್ತು ಮಹಾನಗರ ಪಾಲಿಕೆಯು ವಿಶೇಷ ಕಾಳಜಿ ವಹಿಸಿ ನವೀಕರಿಸಿದ, ರಾಯಚೂರ ನಗರದ ಮಹಾತ್ಮಗಾಂಧಿ ಕ್ರೀಡಾಂಗಣದ ಬಳಿಯಲ್ಲಿನ ನಗರ ಕೇಂದ್ರ ಗ್ರಂಥಾಲಯದ ಉದ್ಘಾಟನಾ ಸಮಾರಂಭ ನಡೆಯಿತು.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಬೆಳಗಿನ ವಿವಿಧ ಕಾರ್ಯಕ್ರಮಗಳ ಮಧ್ಯೆ ಗ್ರಂಥಾಲಯಕ್ಕೆ ತೆರಳಿ ನವೀಕೃತಗೊಂಡ ಗ್ರಂಥಾಲಯದ ವೀಕ್ಷಣೆ ನಡೆಸಿದರು.

ಇದೆ ವೇಳೆ ಸಚಿವರು, ವಿವಿಧ ಮಹಾತ್ಮರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿದರು. ಬಳಿಕ ದೀಪ ಬೆಳಗಿಸಿ ಗ್ರಂಥಾಲಯವನ್ನು ಉದ್ಘಾಟಿಸಿದರು.

ಪರಿಪೂರ್ಣವಾಗಿ ನವೀಕರಿಸಿದ ಗ್ರಂಥಾಲಯ ಕಟ್ಟಡದಲ್ಲಿ ಸುತ್ತಿದ ಸಚಿವರು, ಗ್ರಂಥಾಲಯದ ಮೊದಲ ಮಹಡಿಯಲ್ಲಿ ಹೊಸದಾಗಿ ನವೀಕರಿಸಿದ ಸ್ಪರ್ಧಾತ್ಮಕ ಪರೀಕ್ಷಾ ವಿಭಾಗದ ವೀಕ್ಷಣೆ ನಡೆಸಿದರು. ಗ್ರಂಥಾಲಯದಲ್ಲಿ ಅಚ್ಚುಕಟ್ಟಾಗಿ ಅಳವಡಿಸಿದ

## ನಾನಾ ಯೋಜನೆಗಳ ಸದ್ಬಳಕೆಗೆ ಸಂಸದರಾದ ಜಿ.ಕುಮಾರ್ ನಾಯಕ ವಿಕಲಚೇತನರಿಗೆ ಸಲಹೆ




ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.18**–ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ವಿಕಲಚೇತನರ ಕಲ್ಯಾಣಕ್ಕಾಗಿ ಅನೇಕ ಕಾರ್ಯಕ್ರಮ ರೂಪಿಸಿ ಅನುಷ್ಠಾನಗೊಳಿಸಲಾಗುತ್ತಿದ್ದು, ಅವುಗಳ ಬಗ್ಗೆ ವಿಕಲಚೇತನರಿಗೆ ಸರಿಯಾಗಿ ಮಾಹಿತಿ ನೀಡಬೇಕು. ವಿಕಲಚೇತನ ಫಲಾನುಭವಿಗಳು ಕಾರ್ಯಕ್ರಮಗಳನ್ನು ಸರಿಯಾಗಿ ಬಳಕೆ ಮಾಡಿಕೊಳ್ಳಬೇಕು ಎಂದು ಸಂಸದರಾದ ಜಿ.ಕುಮಾರ್ ನಾಯಕ ಅವರು ಹೇಳಿದರು.

ಗುರುವಾರ ದಂದು ನಗರದ ರಿಮ್ಸ್ ಕಾಲೇಜಿನ ಸಭಾಂಗಣದಲ್ಲಿ ಸಂಯುಕ್ತ ಪ್ರಾದೇಶಿಕ ಕೇಂದ್ರ, ಕೌಶಲ್ಯಾವೃದ್ಧಿ ಪುನರ್ವಸತಿ ಮತ್ತು ವಿಕಲಚೇತನರ ಸಬಲೀಕರಣ, ನೈಪಿಡ್ ದಾವಣಗೆರೆ, ರಾಯಚೂರು ವೈದ್ಯಕೀಯ ಮೆಡಿಕಲ್ ಕಾಲೇಜು ರಾಯಚೂರು ಹಾಗೂ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ನೇರಳೆ ಮೇಳ ಹಾಗೂ ವಿಕಲಚೇತನರಿಗೆ ಉದ್ಯೋಗ ಮೇಳ ಹಾಗೂ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ವೃತ್ತಿಪರ ತರಬೇತಿ, ಉದ್ಯೋಗ, ಸಾಮಾಜಿಕ ಭದ್ರತೆ, ಸಮಾನ ಹಕ್ಕುಗಳನ್ನು ಒದಗಿಸಿ ವಿಕಲಚೇತನರನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ವಿಕಲಚೇತನರಿಗಾಗಿ ಸರ್ಕಾರ ಜಾರಿ ತಂದಿದೆ.**(2ನೇಪುಟಕ್ಕೆ)**

## ರಾಜ್ಯಸರ್ಕಾರದ ವಿರುದ್ಧ ಬಿಜೆಪಿ ಜನಾಂದೋಲನ



**ಬೆಂಗಳೂರು,ಸೆ.18**–ರಾಜ್ಯದ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳ ಬಗ್ಗೆ ಜನಾಂದೋಲನ ನಡೆಸಿ ದೊಡ್ಡಮಟ್ಟದಲ್ಲಿ ಹೋರಾಟವನ್ನು ರೂಪಿಸುವ ಸಂಬಂಧ ಬಿಜೆಪಿಯ ಶಾಸಕರುಗಳ ಚಿಂಥನ–ಮಂಥನ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ.

ರಾಜ್ಯ ಬಿಜೆಪಿಯ ಅಭ್ಯಾಸ ವರ್ಗದ ಭಾಗವಾಗಿ ಬೆಂಗಳೂರಿನ ಹೊರ ವಲಯದ ಖಾಸಗಿ ಹೋಟೆಲ್‌ನಲ್ಲಿಂದು ನಡೆದ ರಾಜ್ಯ ಬಿಜೆಪಿಯ ಎಲ್ಲ ವಿಧಾನಸಭೆ ಹಾಗೂ ವಿಧಾನ ಪರಿಷತ್ ಸದಸ್ಯರು ಹಾಗೂ ಪ್ರಮುಖ ಮುಖಂಡರುಗಳ ಚಿಂಥನ–ಮಂಥನ ಸಭೆಯಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಜನಾಂದೋಲನ ನಡೆಸುವ ತೀರ್ಮಾನವನ್ನು ಕೈಗೊಳ್ಳಲಾಗಿದೆ.

ರಾಜ್ಯದಲ್ಲಿ ಅಧಿಕಾರಕ್ಕೆ ಬಂದು ಎರಡೂವರೆ ವರ್ಷ ಪೂರೈಸುತ್ತಿರುವ ಕಾಂಗ್ರೆಸ್ ಸರ್ಕಾರದ ಆಡಳಿತದಲ್ಲಿ ಅಭಿವೃದ್ಧಿ ಕಾಯಿಗಳು ಕುಂಠಿತಗೊಂಡಿವೆ. ಜನವಿರೋಧಿ ನೀತಿಗಳನ್ನು ರಾಜ್ಯಸರ್ಕಾರ ಅನುಷ್ಠಾನ ಮಾಡುತ್ತಿದೆ. ಜತೆಗೆ ಹಿಂದೂಗಳ ಭಾವನೆಗಳ ಜತೆ ಚೆಲ್ಲಾಟವಾಡಿ ಹಿಂದೂಗಳಿಗೆ ಅಪಮಾನ ಮಾಡುವ ಕಾರ್ಯ ನಡೆದಿದ್ದು, ಇವೆಲ್ಲ ವಿಚಾರಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಹೋರಾಟ ನಡೆಸುವ ಬಗ್ಗೆ ಈ ಸಭೆಯಲ್ಲಿ ಚರ್ಚೆಗಳು ನಡೆದಿವೆ.

## ಆಲ್ಕೋಡ ಅಮೃತ ಸರೋವರ ಕೆರೆಗೆ ದಿ.ಅಮರೇಶ್ವರ ಪಾಟೀಲ್ ನಾಮಫಲಕ ಅನಾವರಣ

ಯುವ ಮಾರ್ಗ ಸುದ್ದಿ

**ಅರಕೇರಾ,ಸೆ.18**–ಹಿರಿಯ ಸ್ವಾತಂತ್ರ್ಯ ಹೋರಾಟಗಾರ ದಿ.ಅಮರೇಶ್ವರ ಪಾಟೀಲ್ ಕೊಡುಗೆ ಅಪಾರ. ಈ ಭಾಗದಲ್ಲಿ ಅವರ ಸ್ಮರಣೆಯನ್ನು ಪ್ರತಿಯೊಬ್ಬರೂ ಮಾಡಬೇಕು ಎಂದು ಗ್ರಾಪಂ ಅಧ್ಯಕ್ಷ ಮಹೇಶ ನಾಯಕ ಹೇಳಿದರು.

ತಾಲೂಕಿನ ಆಲ್ಕೋಡ ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನದ ಅಂಗವಾಗಿ ಅಮೃತ ಸರೋವರ ಕೆರೆಗೆ ಹಿರಿಯ ಸ್ವಾತಂತ್ರ್ಯ ಹೋರಾಟಗಾರ ದಿ.ಅಮರೇಶ್ವರ ಪಾಟೀಲ್ ರವರ ನಾಮ ಫಲಕವನ್ನು ಲೋಕಾರ್ಪಣೆಗೊಳಿಸಿ ಬುಧವಾರ ಮಾತನಾಡಿದರು.

ಬ್ರಿಟೀಷರ ಆಳ್ವಿಕೆಯಿಂದ ದೇಶಕ್ಕೆ 1947ರ ಆ.15 ರಂದು ಸ್ವಾತಂತ್ರ್ಯ ದೊರೆತರೆ, ಕಲ್ಯಾಣ ಕರ್ನಾಟಕ ಭಾಗದಲ್ಲಿ ನಿಜಾಮರ ಆಳ್ವಿಕೆಗೆ ಮುಕ್ತಿ ದೊರೆತಿದ್ದಿಲ್ಲ. ವಿದ್ಯಾರ್ಥಿ ದೆಸೆಯಲ್ಲಿ ರಾಯಚೂರಿನಲ್ಲಿ ಓದುತ್ತಿದ್ದ ದಿ.ಅಮರೇಶ್ವರ ಪಾಟೀಲ್ ಸೇರಿ ಇತರ




ಸ್ವಾತಂತ್ರ್ಯ ಹೋರಾಟಗಾರರು ಡಿಸಿ ಕಚೇರಿ ಯಲ್ಲಿ ರಾಷ್ಟ್ರ ಧ್ವಜವನ್ನು ಹಾರಿಸಿದ್ದರು. ಅಂತಹ ನಾಯಕರು ಮುಂದಿನ ಪೀಳಿಗೆಗೂ ಪ್ರೇರಣೆಯಾಗಲಿ ಎಂದು ಅಮೃತ ಸರೋವರ ಕೆರೆಗೆ ನಮ್ಮೂರಿನ ಹೋರಾಟಗಾರರ ಹೆಸರು ನಾಮಕರಣ ಮಾಡಿದ್ದೇವೆ ಎಂದರು.


ಪಿಡಿಒ ಮಂಜುನಾಥ ಯಾದವ್, ಪ್ರಮುಖರಾದ ಶಿವಶಂಕರ ಪಾಟೀಲ್, ಸಾಬಣ್ಣ ಕಾವಲಿ, ಶಿವಶಂಕರ ಪಾಟೀಲ್, ನಂದೀಶ್ವರ ಪಾಟೀಲ್, ಅಮರೇಶ ಕುಂಬಾರ, ರಂಗಪ್ಪ ಅಬಕಾರಿ, ಶಿವರಾಜ ಪ್ಯಾಟಿಗೇರ, ಮಲ್ಲಯ್ಯ ಗೌಡ ಪೋ.ಪಾ, ವೆಂಕಟೇಶ ಮರಕಂದಿನ್ನಿ, ನಾಗರಾಜ ಮಕ್ಕಾಳಿ ಇತರರಿದ್ದರು.

## ಮಹಾನಗರ ಪಾಲಿಕೆಯ ಸೋಲಾರ್ ಕೂಲ್ ಕಾರ್ಟ್ಗೆ ಸಚಿವರಿಂದ ಚಾಲನೆ

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.18**– ರಾಯಚೂರು ಮಹಾನಗರ ಪಾಲಿಕೆ ಹಾಗೂ ಬೆಂಗಳೂರು ಸೆಲ್ಕೋ ಫೌಂಡೇಶನ್‌ನ ಸಹಭಾಗಿತ್ವದ ಸೋಲಾರ್ ಕೂಲ್ ಕಾರ್ಟ್ಗಳನ್ನು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಫಲಾನುಭವಿಗಳಿಗೆ ವಿತರಿಸಿದರು.

ನವೀಕರಣಗೊಂಡ ರಾಯಚೂರ ನಗರದಲ್ಲಿನ ನಗರ ಕೇಂದ್ರ ಗ್ರಂಥಾಲಯ ಕಟ್ಟಡದ ಆವರಣದಲ್ಲಿ ಸೆ.17ರಂದು ನಡೆದ ಕಾರ್ಯಕ್ರಮದಲ್ಲಿ ರಿಬ್ಬನ್ ಕತ್ತರಿಸಿ ಸೋಲಾರ್ ಕೂಲ್ ಕಾರ್ಟ್ಗಳಿಗೆ ಚಾಲನೆ ನೀಡಿದ ಸಚಿವರು, ಇದೆ ವೇಳೆ ಅವುಗಳ ಬಳಕೆ ಮತ್ತು ಸೋಲಾರ್ ಕೂಲ್ ಕಾರ್ಟ್ಗಳಲ್ಲಿನ ತರಕಾರಿ ಮಾರಾಟದಿಂದ ಆಗುವ ಲಾಭ ನಷ್ಟಗಳ ಬಗ್ಗೆ ಸಚಿವರು ಫಲಾನು



ಭವಿಗಳಿಗೆ ವಿಚಾರಿಸಿ ಮಾಹಿತಿ ಪಡೆದುಕೊಂಡರು.

ಈ ಸೋಲಾರ್ ಕೂಲ್ ಕಾರ್ಟ್ಗಳು ಸೌರ ಬ್ಯಾಟರಿ ಮತ್ತು ಸೌರ ಪ್ರತಿಫಲಕ ಫಿಟ್ಟಿಂಗ್‌ಗಳೊಂದಿಗೆ ಬರುತ್ತವೆ. ಹಣ್ಣುಗಳು ಮತ್ತು ತರಕಾರಿಗಳ ಜೀವಿತಾವಧಿಯನ್ನು ಶೇಕಡಾ 70 ರಷ್ಟು ಹೆಚ್ಚಿಸುತ್ತವೆ. ರಾಯಚೂರಿನಲ್ಲಿ ಬಿಸಿ ವಾತಾವರಣದಲ್ಲಿ ಹಣ್ಣುಗಳು, ಹೂವುಗಳು ಮತ್ತು ತರಕಾರಿಗಳು ವಿಶೇಷವಾಗಿ ಬೇಸಿಗೆಯಲ್ಲಿ ಬಹಳ ಬೇಗನೆ ಕೆಡುವ ಅಥವಾ ಹಳಸುವ ಬೀತಿಯಿದ್ದು, ಈ ಸಮಸ್ಯೆಯನ್ನು ನಿವಾರಿಸಲು ಕೂಲ್ ಕಾರ್ಟ್ ಸಹಾಯವಾಗುತ್ತದೆ ಎಂದು ಇದೆ ವೇಳೆ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಸಚಿವರಿಗೆ ಮಾಹಿತಿ ನೀಡಿದರು.

ಈ ಹೊಸ ಪ್ರಯೋಗವು ಮುಂದಿನ 1 ರಿಂದ 2 ತಿಂಗಳವರೆಗೆ ಯಶಸ್ವಿಯಾದರೆ ಮಹಾನಗರ ಪಾಲಿಕೆಯ ವ್ಯಾಪ್ತಿಯ ಆಸಕ್ತ ಬೀದಿ ವ್ಯಾಪಾರಿಗಳಿಗೆ **(2ನೇಪುಟಕ್ಕೆ)**

ಯುವ ಮಾರ್ಗ

ಶುಕ್ರವಾರ : 19–09–2025

ಮೊದಲನೇಯ ಪುಟದಿಂದ

## ಎಲ್ಲ ಕ್ಯಾಂಪ್‌ಗಳಲ್ಲಿ ಮಹಿಳಾ ಸಭೆ ನಡೆಸಲು ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ ಸೂಚನೆ

ವ್ಯಾಪ್ತಿಯಲ್ಲಿ ಇದುವರೆಗೆ ನಿವೇಶನ ಪಡೆಯದ ಮಾಜಿ ದೇವದಾಸಿ ಮಹಿಳೆಯರು ನಗರಸಭೆ ಕಾರ್ಯಾಲಯಕ್ಕೆ ಭೇಟಿ ನೀಡಿ ಅರ್ಜಿ ಸಲ್ಲಿಸಬೇಕು. ಕಾನೂನಿನಲ್ಲಿ ಅವಕಾಶವಿದ್ದಲ್ಲಿ ಕ್ರಮ ಜರುಗಿಸಲಾಗುವುದು ಎಂದು ಸಿಂಧನೂರ ನಗರಸಭೆ ಆಯುಕ್ತರಾದ ಪಾಂಡುರಂಗ ಅವರು ತಿಳಿಸಿದರು.

ಮಹಿಳೆಯರಿಗೆ ಸಲಹೆ: ಕ್ಯಾಂಪಗಳಲ್ಲಿ, ಜಮೀನು ಇಲ್ಲ, ರಸ್ತೆ ಇಲ್ಲ, ಪೆನ್ಶನ್ ನೀಡುತ್ತಿಲ್ಲ ಎನ್ನುವಂತಹ ಏನೇ ಸಮಸ್ಯೆಗಳಿದ್ದರೂ ಅಲ್ಲಿನ ಮಹಿಳೆಯರು ಅವುಗಳ ಪಟ್ಟಿ ಮಾಡಿ ನೀಡಬೇಕು. ಮಹಿಳೆಯರಿಗೆ ಸಂಬಂಧಿಸಿದ ಅಹವಾಲುಗಳನ್ನು ಆಯೋಗಕ್ಕೆ ಸಲ್ಲಿಸಿದಲ್ಲಿ ನಿಯಮಾನುಸಾರ ಪರಿಶೀಲಿಸಿ ಪರಿಹಾರಕ್ಕೆ ಕ್ರಮ ವಹಿಸಲಾಗುವುದು ಎಂದು ಅಧ್ಯಕ್ಷರು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಸ್ವೀಕೃತವಾದ ಅರ್ಜಿಗಳನ್ನು ಸಂಬಂಧಿಸಿದ ಇಲಾಖೆಗೆ ಕಳಿಸಿ ಸ್ಪಂದನೆ ನೀಡುವೆ ಎಂದು ತಿಳಿಸಿದರು.

ಅಲೆಮಾರಿಗಳು, ಅರೆ ಅಲೆಮಾರಿಗಳ ಸಮುದಾಯದಲ್ಲಿ ಜಾಗದ ಸಮಸ್ಯೆ ಇದ್ದಲ್ಲಿ ಅದು ಆಯೋಗದ ವ್ಯಾಪ್ತಿಗೆ ಬರುವುದಿಲ್ಲ. ತಾವುಗಳು ಪರಿಹಾರಕ್ಕಾಗಿ ತಹಸೀಲ್ದಾರ ಮತ್ತು ಜಿಲ್ಲಾಧಿಕಾರಿಗಳ ಬಳಿಯಲ್ಲಿ ಮನವಿ ಸಲ್ಲಿಸಬೇಕು ಎಂದು ಸಲಹೆ ಮಾಡಿದರು.

ನಾನಾ ಗ್ರಾಮಸ್ಥರು ಭಾಗಿ: ಟೌನಹಾಲನಲ್ಲಿ ನಡೆದ ಸಂವಾದದಲ್ಲಿ ಸಿಂಧನೂರ ನಗರ, ಸುತ್ತಲಿನ ಹೊಸಳ್ಳಿ, ಶಾಸಲಮರಿ, ಯೋಳರಾಗಿ ಕ್ಯಾಂಪ್, ಗ್ವಾಮರಿಸಿ, ಜಾಲಹಳ್ಳಿ ಸೇರಿದಂತೆ ಬೇರೆ ಬೇರೆ ಗ್ರಾಮ, ಕ್ಯಾಂಪನ ಮಹಿಳೆಯರು, ಮಾಜಿ ದೇವದಾಸಿ ಮಹಿಳೆಯರು ಭಾಗಿಯಾಗಿದ್ದರು.

ಡೋಲು, ಹಲಗೆ ಬಾರಿಸಿ ಸ್ವಾಗತಿಸಿದರು: ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರು, ಬೆಳಗ್ಗೆ ಸಿಂಧನೂರ ನಗರಕ್ಕೆ ಪ್ರವೇಶ ಮಾಡುತ್ತಿದ್ದಂತೆ ಸಿಂದೋಲ ಸಮುದಾಯದ ಮಹಿಳೆಯರು ಮತ್ತು ಪುರುಷರು ಡೋಲು, ಹಲಗೆ ಬಾರಿಸಿ, ಬಾರಕೋಲ ಬೀಸಿ ಅದ್ದೂರಿ ಸ್ವಾಗತ ಕೋರಿದರು. ಟೌನ್ ಹಾಲವರೆಗೆ ಮೆರವಣಿಗೆಯಲ್ಲಿ ಕರೆತಂದರು.

ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಾಲೂಕು ಆಡಳಿತ, ತಾಲೂಕು ಪಂಚಾಯತ್, ತಾಲೂಕು ಪೊಲೀಸ್ ಇಲಾಖೆ, ಸಿಂಧನೂರ ಹಾಗೂ ತುರವಿಹಾಳ ಶಿಶು ಅಭಿವೃದ್ಧಿ ಕಾರ್ಯಾಲಯ ಮತ್ತು ಸಿಂಧನೂರ ತಾಲೂಕು ಇಂದಿರಾಗಾಂಧಿ ಸ್ತ್ರಿ ಶಕ್ತಿ ಒಕ್ಕೂಟದ ಆಶ್ರಯದಲ್ಲಿ ಕಾರ್ಯಕ್ರಮ ಜರುಗಿತು.

ಸಮಾರಂಭದಲ್ಲಿ ತಹಸೀಲ್ದಾರ ಅರುಣಕುಮಾರ ದೇಸಾಯಿ, ಸಿಡಿಪಿಓಗಳಾದ ಅಶೋಕ, ಲಿಂಗನಗೌಡ್ರ ಸೇರಿದಂತೆ ಇತರರು ಇದ್ದರು.

## ಮಹಿಳಾ ಸಮುದಾಯದ ನೋವಿಗೆ ಮಿಡಿದ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಚೌಧರಿ

ಬಳಿಯಲ್ಲಿ ಕುಳಿತು, 'ಏನವ್ವ.. ಯಾವ ಊರಿಂದ ಬಂದಿದ್ದೀರಿ ನೀವು.. ಊಟ ಮಾಡ್ರವ್ವ.. ನನಗು ಹಸುವಾಗಿದೆ ಕಣವ್ವ.. ಬೆಳಗ್ಗೆಯಿಂದ ಏನೂ ತಿಂದಿಲ್ಲ..

ರೊಟ್ಟಿ ತಿನ್ಲಾ' ಎಂದು ಹೇಳುತ್ತ ರೋಗಿಯೊಬ್ಬರ ಸಂಬಂಧಕರಿಂದ ಎರಡು ಬಾರಿ ಕೈತುತ್ತು ಪಡೆದರು.

ಆ ಜಾತಿ, ಈ ಜಾತಿ ಎಂದು ಬೇಧ–ಭಾವ ಮಾಡುವುದು ಈ ಕಾಲಕ್ಕೂ ನಿಲ್ಲುತ್ತಿಲ್ಲ. ನೊಂದು ಬರುವ ಎಲ್ಲ ಮಹಿಳೆಯರಿಗೂ ಸ್ಪಂದಿಸಿ, ಆತ್ಮೀಯವಾಗಿ ಮಾತನಾಡಿಸಿ, ಅಪ್ಪಿಕೊಂಡು ಧೈರ್ಯ ಹೇಳುವ, ಸಾಂತ್ವನ ಹೇಳುವ, ಅವರ ಬಳಿ ಕುಳಿತು ಊಟ ಮಾಡುವ ನಿಮ್ಮ ನಡೆ ಇಡೀ ಮಹಿಳಾ ಸಮುದಾಯಕ್ಕೆ ಮಾದರಿಯಾಗಿದೆ ಎಂದು ಇದೆ ವೇಳೆ ಮುಖಂಡರಾದ ಶ್ರೀದೇವಿ ನಾಯಕ ಅವರು ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರ ಕಾರ್ಯವೈಖರಿಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಮುಖಂಡರಾದ ಶ್ರೀದೇವಿ ಶ್ರೀನಿವಾಸ, ಈರಮ್ಮ ಗುಂಜಳ್ಳಿ, ಮಂಜುಳಾ ಅಮರೇಶ, ವಂದನಾ ಶಿವಕುಮಾರ, ಪ್ರತಿಭಾ ರೆಡ್ಡಿ, ಲಕ್ಷ್ಮಿ ಹಾಗೂ ಇನ್ನೀತರರು ಇದ್ದರು.

## ಮಹಾನಗರ ಪಾಲಿಕೆಯ ಸೋಲಾರ್ ಕೂಲ್ ಕಾರ್ಟ್ಗೆ ಸಚಿವರಿಂದ ಚಾಲನೆ

ಈ ಹೊಸ ಕೂಲ್ ಕಾರ್ಟ್ಗಳನ್ನು ಖರೀದಿಸಲು ಸಹಾಯ ಧನ ಮತ್ತು ಅಗ್ಗದ ಸಾಲಗಳನ್ನು ಒದಗಿಸಲು ಅನುಕೂಲ ಮಾಡಿಕೊಡಲಾಗುತ್ತದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು,

ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಪಾಲಿಕೆಯ ಹಿರಿಯ ಸದಸ್ಯ ಜಯಣ್ಣ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ, ರಾಯಚೂರು ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಈರಣ್ಣ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಪಾಲಿಕೆ ಆಡಳಿತ ಉಪ ಆಯುಕ್ತರಾದ ಸಂತೋಷ ರಾಣಿ ಸೇರಿದಂತೆ ಇನ್ನೀತರರು ಇದ್ದರು.

## ನಾನಾ ಯೋಜನೆಗಳ ಸದ್ಬಳಕೆಗೆ ಸಂಸದರಾದ ಜಿ.ಕುಮಾರ್ ನಾಯಕ ವಿಕಲಚೇತನರಿಗೆ ಸಲಹೆ

ವಿಕಲಚೇತನರಿಗೆ ಶೈಕ್ಷಣಿಕ ಸೌಲಭ್ಯ, ಉದ್ಯೋಗಾವಕಾಶ ಮತ್ತು ತರಬೇತಿ ಒದಗಿಸುವುದರ ಜತೆಗೆ ಅವಶ್ಯಕ ಸಾಧನ ಸಲಕರಣೆ ಪೂರೈಕೆ ಮಾಡುವ ಮೂಲಕ ಸಮಾಜದಲ್ಲಿ ಘನತೆ, ಗೌರವದಿಂದ ಬಾಳಲು ಪೂರಕ ವಾತಾವರಣ ಸೃಷ್ಟಿಸಲಾಗುತ್ತಿದೆ ಎಂದರು.

ನೇರಳೆ ಮೇಳವು ದೇಶಾದ್ಯಂತ ನಡೆಯುತ್ತಿದ್ದು, ಕರ್ನಾಟಕದ ರಾಜ್ಯದಲ್ಲಿ ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಮಾತ್ರ ಈ ಮೇಳ ನಡೆಯುತ್ತಿರುವುದು ಹೆಮ್ಮೆಯ ಸಂಗತಿ ಆಗಿದೆ. ಆರೋಗ್ಯ, ಶಿಕ್ಷಣ ಕ್ಷೇತ್ರದಲ್ಲಿ ಈ ಭಾಗದ ಪ್ರಗತಿ ಕಡಿಮೆಯಿದೆ. ಈ ಭಾಗದಲ್ಲಿ ತಾಯಿ ಮತ್ತು ಮಕ್ಕಳ ಮರಣದ ಪ್ರಮಾಣ ಕಡಿಮೆ ಮಾಡಬೇಕು ಎಂದರು.

ರಾಯಚೂರು ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿಕಲಚೇತನರಿದ್ದು, ಅವರಿಗೆ ವಿವಿಧ ಸೌಲಭ್ಯಗಳನ್ನು ದೊರಕಿಸಬೇಕು. ಈ ನಿಟ್ಟಿನಲ್ಲಿ ಸರ್ಕಾರಿ ಹಾಗೂ ಇತರೆ ಸಂಸ್ಥೆಗಳ ಸೇವಾ ಮನೋಭಾವನೆ ಮೆಚ್ಚುವಂತದ್ದು, ನಿಮ್ಮ ನಿಮ್ಮ ಸೇವೆಯನ್ನು ಸರಿಯಾಗಿ ನಿರ್ವಹಿಸಬೇಕು ಎಂದು ಸಲಹೆ ಮಾಡಿದರು.ಪ್ರತಿಯೊಬ್ಬರು ಒಂದಲ್ಲ ಒಂದು ರೀತಿಯ ಸಮಸ್ಯೆಯಿಂದ ಬಳಲುತ್ತಿರುತ್ತಾರೆ. ಅದನ್ನು ಸರಿಪಡಿಸಿಕೊಳ್ಳಬೇಕು. ವಿಕಲಚೇತನರಿಗೆ ಸರಿಯಾಗಿ ಆರೈಕೆ ಮಾಡಬೇಕು. ಎಲ್ಲರಂತೆ ಅವರನ್ನು ಗೌರವದಿಂದ ಕಾಣುವ ಮನೋಭಾವನೆ ಬೆಳೆಸಿಕೊಳ್ಳಬೇಕು ಎಂದರು.

ಈ ವೇಳೆ ರಿಮ್ಸ್ ಸಂಸ್ಥೆಯ ಮನೋವೈದ್ಯರಾದ ಡಾ.ರಮೇಶ ಬಾಬು ಅವರು ಮಾತನಾಡಿ, ನೊಂದವರ ಸೇವೆಯಲ್ಲಿಯೇ ದೇವರನ್ನು ಕಾಣಬೇಕೆಂದು ಹೇಳಿದರು.ವಿಕಲಚೇತನರ ಸಾಧನ ಸಲಕರಣೆಗಳ ಪ್ರದರ್ಶನ: ನಗರದ ರಾಯಚೂರು ವೈದ್ಯಕೀಯ ಮೆಡಿಕಲ್ ಕಾಲೇಜಿನ ಒಂದನೆಯ ಮಹಡಿಯಲ್ಲಿ ದಿವ್ಯಾಂಗರ ಕೌಶಲ್ಯಾಭಿವೃದ್ಧಿ ಪುನರ್ವಸತಿ ಮತ್ತು ಸಬಲೀಕರಣ ಸಂಯುಕ್ತ ಪ್ರಾದೇಶಿಕ ಕೇಂದ್ರ ದಾವಣಗೆರೆ, ಬೆಂಗಳೂರಿನ ಸಿಬಿಎಮ್ ಇಂಡಿಯಾ ಟ್ರಸ್ಟ್, ಸಾಮ, ಔಟ್ ಬ್ಯಾಂಕ್,ರಾಯಚೂರಿನ ಶ್ರೀ ಮಾಣಿಕ್ಯಪ್ರಭು ಅಕಾಡೆಮಿ ಫಾರ್ ದಿ ಬ್ಲೈಂಡ್, ಸೌರ ಸ್ಕೆಲ, ರಾಯಚೂರಿನ ಎಪಿಡಿ ಸಂಸ್ಥೆಗಳು ಸೇರಿದಂತೆ ಸುಮಾರು 15 ಸಂಸ್ಥೆಗಳು ಮೇಳದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರೀಕರಿಗೆ ಬೇಕಾಗುವ ಸಲಕರಣೆಗಳ ಕುರಿತು ವಸ್ತು ಪ್ರದರ್ಶನ ಹಾಗೂ ಮಾಹಿತಿ ನೀಡಲಾಯಿತು. ಮೇಳದಲ್ಲಿ ಸುಮಾರು 523 ಜನರು ನೋಂದಣಿಯಾಗಿದ್ದರು.

ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ರಾಯಚೂರು ಒಕ್ಕಲುತನ ಹುಟ್ಟುವಳಿ ಮಾರಾಟ ಮತ್ತು ಸಹಕಾರ ಸಂಘದ ಅಧ್ಯಕ್ಷರಾದ ಜಯಂತರಾವ್ ಪತಂಗೆ, ರಿಮ್ಸ್ ಸಂಸ್ಥೆಯ ನಿರ್ದೇಶಕರಾದ ಡಾ. ರಮೇಶ್ ಬಿ.ಹೆಚ್., ಜಿಲ್ಲಾ ವಿಕಲಚೇತನರ ಇಲಾಖೆಯ ಅಧಿಕಾರಿ ಶ್ರೀದೇವಿ, ಪ್ರಾಂಶುಪಾಲರಾದ ಡಾ.ರಾಹುಲ್ ಕೀರ್ತಿ, ರಾಯಚೂರು ಮಹಾನಗರ ಪಾಲಿಕೆಯ ಜೋನಲ್ ಕಮಿಷನರ್ ಮಲ್ಲಿಕಾರ್ಜುನ್, ಸಿ.ಆರ್.ಸಿ ಸಂಸ್ಥೆಯ ಮುಖ್ಯಸ್ಥರಾದ ತಾಮರ ಸೆಲ್ವನ, ರಾಯಚೂರಿನ ನವೋದಯ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಡಾ.ಕೌಶಿಕ್ ರೆಡ್ಡಿ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಹಿರಿಯ ನಾಗರೀಕರು ಕಾರ್ಯಕ್ರಮದಲ್ಲಿ ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111 9743496111

## ಮಹಿಳಾ ಆಯೋಗದ ಅಂಗಳಕ್ಕೆ ಬಂದ ಸಿಂಧನೂರ ತಾಲೂಕಿನ ಮಧುಮೇಹ ಪೀಡಿತ ವಿದ್ಯಾರ್ಥಿನಿಯ ಪಾಲಕರು




**ಯುವ ಮಾರ್ಗ ಸುದ್ದಿ**

**ರಾಯಚೂರ,ಸೆ.18**–ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಇನ್ಸುಲಿನ್ ಸಿಗುತ್ತಿಲ್ಲ. ಮಗಳಿಗೆ ಚಿಕಿತ್ಸೆ ಕೊಡಿಸುವುದು ಹೊರೆಯಾಗುತ್ತಿದೆ ಎಂದು ಸಿಂಧನೂರ ತಾಲೂಕಿನ ಕುರಕುಂದ ಗ್ರಾಮದ ನಿವಾಸಿ ಗುಡದಪ್ಪ ಅವರು ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಅವರ ಬಳಿ ಅಳಲು ತೋಡಿಕೊಂಡರು.

ಸಿಂಧನೂರಿನ ಟೌನ ಹಾಲಗೆ ಮಗಳೊಂದಿಗೆ ಆಗಮಿಸಿದ್ದ ಗುಡದಪ್ಪ ಅವರು ಕಾರ್ಯಕ್ರಮದ ಮಧ್ಯೆದಲ್ಲಿ ವೇದಿಕೆ ಏರಿ ಅಧ್ಯಕ್ಷರ ಬಳಿಗೆ ಬಂದು ತಮ್ಮ ಪುತ್ರಿಯ ಅನಾರೋಗ್ಯದ ವಿಷಯವನ್ನು ಪ್ರಸ್ತಾಪಿಸಿದರು. ಸುಗರ್ ಪ್ರಮಾಣ ಚೆಕ್ ಮಾಡುವ ಸೂಜಿ, ಪಿನ್ ಖರೀದಿ ಮತ್ತು ಇನ್ಸುಲಿನಗೆ ಪ್ರತಿ ತಿಂಗಳು 5 ಸಾವಿರ ರೂ ಖರ್ಚಾಗುತ್ತದೆ. ಬಡವರಾದ ನಮಗೆ ಇದರಿಂದಾಗಿ ಆರ್ಥಿಕವಾಗಿ ಹೊರೆಯಾಗಿ ಪರಿಣಮಿಸಿದೆ ಎಂದು ಗುಡದಪ್ಪ ಅವರು ಅಲವತ್ತು ಕೊಂಡರು. ಈ ವೇಳೆ, ಅಧ್ಯಕ್ಷರು ಮಧುಮೇಹ ಪೀಡಿತ ವಿದ್ಯಾರ್ಥಿನಿಯೊಂದಿಗೆ ಮಾತನಾಡಿ, ಅವಳ ಆರೋಗ್ಯದ ಬಗ್ಗೆ ಕೇಳಿದರು.

ಏಳನೇ ವಯಸ್ಸಿಗೆ ನನಗೆ ಮದುಮೇಹ ಬಂದಿದೆ. ಈಗ 10ನೇ ತರಗತಿಯಲ್ಲಿದ್ದೇನೆ ಎಂದು ವಿದ್ಯಾರ್ಥಿನಿ ತಿಳಿಸಿದಾಗ, ಸಿಂಧನೂರ ತಾಲೂಕು ವೈದ್ಯಾಧಿಕಾರಿಗೆ ವೇದಿಕೆಗೆ ಕರೆದು, ವಿದ್ಯಾರ್ಥಿನಿಯ ದೂರಿನ ಬಗ್ಗೆ ಚರ್ಚಿಸಿದರು. ವಿದ್ಯಾರ್ಥಿನಿಯ ಅನಾರೋಗ್ಯದ, ಸರ್ಕಾರಿ ಔಷಧಾಲಯಗಳಲ್ಲಿ ಇನ್ಸುಲಿನ್ ಸಿಗುತಿಲ್ಲ ಎನ್ನುವ ದೂರನ್ನು ತಾಲೂಕು ಆರೋಗ್ಯಾಧಿಕಾರಿಗೆ ಹಸ್ತಾಂತರಿಸಿದರು. ವಿದ್ಯಾರ್ಥಿನಿ ಹಾಗೂ ಅವಳ ಪಾಲಕರನ್ನು ಆಸ್ಪತ್ರೆಗೆ ಕರೆಯಿಸಿ, ಮದುಮೇಹಕ್ಕೆ ಉಚಿತ ಚಿಕಿತ್ಸೆ ಕೊಡಿಸುವ ವ್ಯವಸ್ಥೆ ಮಾಡುವುದಾಗಿ ಸಿಂಧನೂರ ತಾಲೂಕು ವೈದ್ಯಾದಿಕಾರಿ ತಿಳಿಸಿದರು.

**ಅರ್ಜಿ ಸಲ್ಲಿಸಲು ದುಂಬಾಲು:** ಸಿಂಧನೂರನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಆಯೋಗ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಾಲೂಕುಡಳಿತ, ತಾಲೂಕು ಪಂಚಾಯತ್, ತಾಲೂಕು ಪೊಲೀಸ್ ಇಲಾಖೆ, ಸಿಂಧನೂರ ಹಾಗೂ ತುರವಿಹಾಳ ಶಿಶು ಅಭಿವೃದ್ಧಿ ಕಾರ್ಯಾಲಯ ಮತ್ತು ಸಿಂಧನೂರ ತಾಲೂಕು ಇಂದಿರಾಗಾಂಧಿ ಸ್ತ್ರಿ ಶಕ್ತಿ ಒಕ್ಕೂಟದ ಆಶ್ರಯದಲ್ಲಿ ಸೆ.18ರಂದು ನಡೆದ ಸಂವಾದ ಕಾರ್ಯಕ್ರಮದಲ್ಲಿ ಸಿಂಧನೂರ ನಗರ ಸೇರಿದಂತೆ ಸುತ್ತಲಿನ ನಾನಾ ಕಡೆಗಳಿಂದ ಮಾಜಿ ದೇವದಾಸಿ ಮಹಿಳೆಯರು ಹಾಗೂ ಸಿಂದೋಲ ಸಮುದಾಯದ ಅಲೆಮಾರಿ ಮಹಿಳೆಯರು ಮತ್ತು ಸಾರ್ವಜನಿಕರು ಆಗಮಿಸಿ ಟೌನ್ ಹಾಲನಲ್ಲಿ ಕಿಕ್ಕಿರಿದು ಸೇರಿದ್ದರು. ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಅವರಿಗೆ ತಮ್ಮ ದೂರು ಅರ್ಜಿ ಸಲ್ಲಿಸಲು ನಾ ಮುಂದೆ ತಾ ಮುಂದೆ ಎಂದು ದುಂಬಾಲು ಬಿದ್ದು, ಜನರನ್ನು ವೇದಿಕೆಯಿಂದ ಕೆಳಗಿಳಿಸಲು ಪೊಲೀಸರು ಹರಸಾಹಸಪಟ್ಟರು.

## ಕಿಕ್ಕರ್: ಸಾಂಸ್ಕೃತಿಕ, ಕ್ರೀಡೆ ಹಾಗೂ ರಾಷ್ಟ್ರೀಯ ಸೇವಾ ಯೋಜನೆಯ ಚಟುವಟಿಕೆಗಳ ಉದ್ಘಾಟನಾ ಸಮಾರಂಭ

**ಯುವ ಮಾರ್ಗ ಸುದ್ದಿ**

**ಆಳಂದ,ಸೆ.18**–ಯಶಸ್ಸು ಗಳಿಸಲು ಕಠಿಣ ಪರಿಶ್ರಮ ಮತ್ತು ಸಮಯ ಪ್ರಜ್ಞೆ ಮುಖ್ಯ ಹಾಗೂ ಕಾಲೇಜಿನ ಸೌಲಭ್ಯಗಳನ್ನು ಸರಿಯಾಗಿ ಬಳಸಿಕೊಂಡು ಜೀವನದಲ್ಲಿ ಉನ್ನತ ಮಟ್ಟಕ್ಕೆ ಬರಬೇಕು ಎಂದು ಗುಲ್ಬರ್ಗಾ ವಿವಿಯ ಕುಲಸಚಿವ (ಆಡಳಿತ) ಪ್ರೊ. ರಮೇಶ ಲಂಡನಕರ್ ಅಭಿಪ್ರಾಯಪಟ್ಟರು.

ಗುರುವಾರ ಆಳಂದ ಪಟ್ಟಣದ ಎಸ್‌ಆರ್‌ಜಿ ಫೌಂಡೇಶನನ ಅಡಿಯಲ್ಲಿ ನಡೆಯುತ್ತಿರುವ ವೆಂಕಯ್ಯ ಕೂಸಯ್ಯ ಗುತ್ತೇದಾರ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪದವಿ ಕಾಲೇಜಿನ ಬಿ.ಎ, ಬಿ.ಎಸ್ಸಿ ಮತ್ತು ಬಿ.ಕಾಮ್ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಜೀವನದಲ್ಲಿ ಪ್ರಶ್ನಿಸುವ ಮನೋಭಾವನೆಯೊಂದಿಗೆ ತಾಳ್ಮೆಯನ್ನು ಬೆಳೆಸಿಕೊಂಡಾಗ ಜ್ಞಾನ ವೃದ್ಧಿಯಾಗುತ್ತದೆ. ವಿಷಯವನ್ನು ಆಳವಾಗಿ ವಿಶ್ಲೇಷಿಸುವ ಮೂಲಕ ಸರಿ ತಪ್ಪಿನ ಅರಿವಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ಪ್ರಶ್ನಿಸುವ ಪ್ರವೃತ್ತಿಯನ್ನು ಬೆಳೆಸಿಕೊಳ್ಳಬೇಕು. ಪ್ರಶ್ನೆಯಿಂದ ಉತ್ತರ, ಉತ್ತರದಿಂದ ಪ್ರಶ್ನೆ ಹೀಗೆ ವಿದ್ಯೆ ಸಂಚರಿಸುತ್ತಿರಬೇಕು ಎಂದರು.

ಮೊದಲಿಗಿಂತಲು ಇಂದು ವಿದ್ಯಾರ್ಥಿಗಳು ಹೆಚ್ಚು ಶ್ರಮವಹಿಸಿ ಅಭ್ಯಾಸದಲ್ಲಿ ತೊಡಗುತ್ತಿದ್ದಾರೆ ಇದರಿಂದಾಗಿ ಅಂಕಗಳ ಗಳಿಕೆಯಲ್ಲಿ ಪೈಪೋಟಿ ಏರ್ಪಟ್ಟಿದೆ ಇನ್ನೂ ಇತ್ತಿಚೀನ ದಿನಮಾನಗಳಲ್ಲಿ ಶಿಕ್ಷಣದ ಜೊತೆಗೆ ಹಣದ ಪೈಪೋಟಿ ಆರಂಭವಾಗಿದೆ ಎಂದರು.

ಸಾಮಾಜಿಕ ಭವಿಷ್ಯವನ್ನು ರೂಪಿಸಿಕೊಳ್ಳಲು ಸಹಕಾರಿಯಾಗುವ ಮತ್ತು ಆರ್ಥಿಕ ಸದೃಡತೆಗಾಗಿ ಅಥವಾ ಹಣಕಾಸಿನ ನೀರಿಕ್ಷೆಯೊಂದಿಗೆ ಪದವಿ ಗಳಿಸಲು ಹೋರಾಟ ನಡೆಸುವುದು ಸೂಕ್ತವಲ್ಲ ಪಾಲಕರ ಮನಸ್ಥಿತಿಗಳನ್ನು ಮತ್ತು ಉಪನ್ಯಾಸಕರ ಗೌರವವನ್ನು ಹೆಚ್ಚಿಸಲು ವಿದ್ಯಾರ್ಥಿಗಳು ಶ್ರಮಿಸಬೇಕು ಎಂದು ಕರೆ ನೀಡಿದರು.

ಮಾಜಿ ಶಾಸಕ ಹಾಗೂ ಸಂಸ್ಥೆಯ ಅಧ್ಯಕ್ಷ ಸುಭಾಷ ಆರ್ ಗುತ್ತೇದಾರ ಮಾತನಾಡಿ, ಶಿಕ್ಷಣ ಸಂಸ್ಥೆಗಳು ಶಾಲೆಯಲ್ಲಿನ ಮಕ್ಕಳಿಗೆ ಸಂಸ್ಕೃತಿ ಸಂಸ್ಕಾರ ಪ್ರಾಪಂಚಿಕ ಜ್ಞಾನ ಹಾಗೂ ಕೌಶಲ್ಯಗಳನ್ನು ರೂಡಿಸಿಕೊಳ್ಳುವ ಮೂಲಕ ದೇಶವನ್ನು ಕಟ್ಟುವ ಕೆಲಸದಲ್ಲಿ ಸಹಕಾರಿಯಾದಲ್ಲಿ ಮಾತ್ರ ವಿದ್ಯಾರ್ಥಿಗಳು ಪಡೆದಂತಹ ಪದವಿಗಳಿಗೆ ಇನ್ನೂ ಹೆಚ್ಚಿನ ಮೆರಗು ಸಿಗಲಿದೆ ಈ ನಿಟ್ಟಿನಲ್ಲಿ ಶಿಕ್ಷಣದ ನಂತರ ಒಳ್ಳೆಯ ಅವಕಾಶಗಳಿದ್ದು ಅವುಗಳನ್ನು ಪಡೆದುಕೊಂಡು ಸುಂದರ ಬದುಕು ಕಟ್ಟಿಕೊಳ್ಳುವಂತೆ ಕರೆ ನೀಡಿದರು.

ಅರಿವಿನ ಮೂಲಕ ತಾವು ಸಂಪಾದಿಸಿದ ಜ್ಞಾನವನ್ನು ಸಮಾಜದ ಒಳಿತಿಗೆ ಬಳಕೆ ಮಾಡಬೇಕು. ಇತ್ತೀಚಿನ ಯುವಸಮೂಹ ಕೀಳರಿಮೆ, ಜಿಗುಪ್ಸೆ ಅತಿಯಾಗಿ ಹೊಂದಿರುವುದರಿಂದ ಜೀವನದಲ್ಲಿ ಫಲ ಕಾಣಲು ಸಾಧ್ಯವಾಗುತ್ತಿಲ್ಲ ಅದಕ್ಕಾಗಿ ಸಕಾರಾತ್ಮಕ ಚಿಂತನೆ, ಸದ್ವಿಚಾರ, ಸದ್ಗುಣಗಳನ್ನು ವಿದ್ಯಾರ್ಥಿಗಳು ಅಳವಡಿ



ಸಿಕೊಳ್ಳಬೇಕು ಎಂದು ವಿದ್ಯಾರ್ಥಿ ಸಮೂಹಕ್ಕೆ ಕರೆ ನೀಡಿದರು.

ಯಶಸ್ಸು ಪಡೆಯಲು ಅಡ್ಡದಾರಿಯಿಲ್ಲ ಕೇವಲ ಪರಿಶ್ರಮವೊಂದೇ ಅದಕ್ಕಿರುವ ಮಾರ್ಗವಾಗಿದೆ ಅದನ್ನು ಸಾಧಿಸಲು ನಿರಂತರ ಅಧ್ಯಯನ ಮಾಡುವುದು ಅಗತ್ಯವಾಗಿದೆ ಈ ನಿಟ್ಟಿನಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಜೀವನದಲ್ಲಿ ಮುಂದೆ ಬರಲು ಶ್ರಮಿಸಬೇಕು ಎಂದು ಹೇಳಿದರು.

ಪ್ರೊ. ರಮೇಶ ರಾಠೋಡ ಮಾತನಾಡಿ, ವಿದ್ಯಾರ್ಥಿಗಳಿಗೆ ಅವರ ಉಜ್ವಲ ಭವಿಷ್ಯಕ್ಕೆ ಶುಭ ಹಾರೈಸುತ್ತಾ, ಜ್ಞಾನ ಸಂಪಾದನೆಗೆ ಶ್ರಮಿಸಿದಷ್ಟೂ ವ್ಯಕ್ತಿತ್ವ ವಿಕಸನಗೊಳ್ಳುತ್ತದೆ. ಉಜ್ವಲ ಭವಿಷ್ಯ ಹೊಂದಲು ನಾಂದಿಯಾಗುತ್ತದೆ. ಇದರಿಂದ ಇತರರ ಬದುಕು, ಬವಣೆಗೆ ಸ್ಪಂದಿಸುವ ಮನೋಭಾವ ಬೆಳೆಸಿಕೊಳ್ಳಿ ಎಂದು ಹೇಳಿದರು.

ಪ್ರಾಚಾರ್ಯ ಕಲ್ಯಾಣಿ ಸಾವಳಗಿ ಮಾತನಾಡಿ, ಜಗತ್ತಿನ ಅನೇಕ ದಾರ್ಶನಿಕರು ತೀರಾ ಬಡತನ ಕುಟುಂಬದಲ್ಲಿ ಜನಿಸಿ ತಮ್ಮ ಅಗಾಧವಾದ ಜ್ಞಾನ ಪ್ರತಿಭೆಯಿಂದ ಇತಿಹಾಸದಲ್ಲಿ ಅಜರಾಮರರಾಗಿದ್ದಾರೆ ಈ ನಿಟ್ಟಿನಲ್ಲಿ ಇಂದಿನ ಯುವಸಮೂಹ ಚಿಂತನೆ ಮಾಡಬೇಕಾದ ಅಗತ್ಯವಿದೆ ಎಂದು ಹೇಳಿದರು.

ನಮ್ಮ ದಿನನಿತ್ಯದ ಬದುಕಿನ ಅವಶ್ಯಕತೆಗಳನ್ನು ಪೂರೈಸುಕೊಳ್ಳುವುದರ ಜೊತೆಗೆ ಸಾಮಾಜಿಕ ಕಳಕಳಿಯು ಹೊಂ ದಿರಬೇಕು ಅದಕ್ಕಾಗಿ ಉತ್ತಮವಾದ ಪುಸ್ತಕಗಳನ್ನು ಓದುವ ಹವ್ಯಾಸ ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಬದಲಾದ ಕಾಲಘಟ್ಟದಲ್ಲಿ ಆದ್ಯತೆಗಳು ಬದಲಾಗಿವೆ ಅದಕ್ಕಾಗಿ ವಿದ್ಯಾರ್ಥಿಗಳು ಈಗಿನ ಸನ್ನಿವೇಶಕ್ಕೆ ತಕ್ಕಂತೆ ಎದುರಾಗುವ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ಮಾನಸಿಕವಾಗಿ ಸಿದ್ಧರಾಗಿರಬೇಕು ಎಂದರು. ವಿದ್ಯಾರ್ಥಿಗಳು ತಮಗೆ ಸಿಗುವ ಅವಕಾಶಗಳನ್ನು ಶ್ರದ್ಧೆಯಿಂದ ಬಳಸಿಕೊಂಡು ಜೀವನದಲ್ಲಿ ಉನ್ನತ ಮಟ್ಟಕ್ಕೇರಲಿ ಮತ್ತು ಸಮಾಜ ಮತ್ತು ರಾಷ್ಟ್ರಕ್ಕೆ ಉತ್ತಮ ಕೊಡುಗೆಯಾಗಿ ಹೊರಹೊಮ್ಮಲಿ ಎಂದು ಹಾರೈಸಿದರು.

ಕಾರ್ಯಕ್ರಮದ ವೇದಿಕೆಯ ಮೇಲೆ ಡಾ. ಅಪ್ಪಾಸಾಬ ಬಿರಾದಾರ, ಡಾ. ಅಶೋಕರೆಡ್ಡಿ, ಶಿವಶಂಕರ, ವಿದ್ಯಾರ್ಥಿ ಪ್ರತಿನಿಧಿ ವಾಣಿ ದೀಕ್ಷಿತ ಇದ್ದರು.

## ನವೀಕರಣಗೊಂಡ ರಾಯಚೂರು ನಗರ ಕೇಂದ್ರ ಗ್ರಂಥಾಲಯ: ಸಚಿವರಿಂದ ಚಾಲನೆ

ಕಂಪ್ಯೂಟರ್‌ಗಳು, ಅತ್ಯಾಧುನಿಕ ಕಂಪ್ಯೂಟರ್ ಲ್ಯಾಬ್ ಮತ್ತು ಮಕ್ಕಳ ಗ್ರಂಥಾಲಯ ವಿಭಾಗಕ್ಕೆ ಭೇಟಿ ನೀಡಿ ವೀಕ್ಷಣೆ ನಡೆಸಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಹಾಗೂ ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಮತ್ತು ನಗರ ಕೇಂದ್ರ ಗ್ರಂಥಾಲಯದ ಮುಖ್ಯ ಗ್ರಂಥಾಲಯ ಅಧಿಕಾರಿ ನಿರ್ಮಲ ಹೆಚ್.ಹೊಸೂರು ಅವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಈ ನಗರ ಗ್ರಂಥಾಲಯದ ಕಟ್ಟಡವು ಹಳೆಯದಾಗಿದ್ದು, ಸ್ಥಾಪನೆಯಾದ ನಂತರ ಇದೆ ಮೊದಲನೇ ಬಾರಿಗೆ ನವೀಕರಣಗೊಳಿಸಿ, ಓದುಗ ಸ್ನೇಹಿ ವಾತಾವರಣ ಕಲ್ಪಿಸಲಾಗಿದೆ ಎಂದು ಅಧಿಕಾರಿಗಳು ಸಚಿವರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಗ್ರಂಥಾಲಯದ ಸಿಬ್ಬಂದಿ ರಾಘವೇಂದ್ರ ರಾವ್, ರಾಗಿಣಿ, ಮರಿಯಪ್ಪ, ರಾಜಶ್ರೀ, ತಿಮ್ಮಲಮ್ಮ, ವಿನೋಧ, ಪಾಡುರಂಗ ಸೇರಿದಂತೆ ಪಾಲಿಕೆ ಎಂಜಿನಿಯರ್‌ಗಳು, ನಿರ್ಮಿತಿ ಕೇಂದ್ರದ ಅಧಿಕಾರಿಗಳು ಇದ್ದರು.

## ಕವನ

ನಿನ್ನ ರೂಪ ಕಣ್ಣುಗಳು ಹೊನ್ನ ಕಾಂತಿ.. ನಿನ್ನ ಮೈ ಮಾಟ ಅಂದದ ಸೊಬಗು.. ನಾ ಬಯಸಿದೆ ನಿನ್ನ ಚಲುವೆ.... ನನ್ನ ಮನವ ಜಾರಿದೆ ಚಲುವೆ... ಚಂದದ ಗೊಂಬೆ, ಬೆಳ್ಳಿರಂಬೆ.. ಮನದ ಭಾವ ನೂರು ಮೂಡಿದೆ... ಮನೆಕೆ, ಊರ್ವಶಿ,ಚಲುವಿನ ಅಂದ. ನಿಂದಾಗಿದೆ..ನಿಂದಾಗಿದೆ... । ಪಲ್ಲವಿ ॥

ಕೋಗಿಲೆ ಧ್ವನಿ, ಇಂಪಿನ, ಕಂಪನ. ತೋಟದ ಹೂ, ಬೆಟ್ಟದಹೂ,ಅರಳಿ ಸೌಗಂದ ತಂಗಾಳಿ ತೇಲುತಿದೆ... ಮನಸು ಹಿಗ್ಗಿ, ಸುಮಧುರವಾಗಿದೆ... ನಮ್ಮ ಸುಂದರ ಮನ ಒಂದಾಗಿದೆ... ಬಾಳ ದೋಣಿ ಚಂದಾಗಿ

ಮೋಡಗಳು ಮುತ್ತ ಹನಿಗಳು ಸುರಿದು. ಸುಗ್ಗಿ ಸಂಭ್ರಮ ಬುರಮೇ ಹಸಿರಾಗಿದೆ. ಚಲುವೆ ನಿನ್ನ ನಗುವು, ನಿನ್ನ ಮೊಗಕೆ ಮೆರಗುತಂದಿದೆ ಮನದ ಹೂ ಅರಳಿದೆ.. ಬಾನೆತ್ತರ, ಹಕ್ಕಿ, ಹಾರಿ ಮುಗಿಲ ಚುಕ್ಕಿ, ತರುವ ಆಸೆ ನನ್ನದಾಗಿದೆ..ನನ್ನದಾಗಿದೆ ನಿನ್ನ ನಕ್ಷತ್ರ ಬೆಳಕಲಿ ಸಿಹಿ ಮುತ್ತ ನೀಡುತ ಶೃಂಗರಿಸುವೆ.ಚಂದದಚಲುವೆ..!2॥

– ವೀರೇಶ್ ವಿ ಖೈರವಾಡಗಿ



# ಕೊತಲಾಪೂರ ಯಲ್ಲಮ್ಮ ದೇವಸ್ಥಾನ ಕಳವು

**ಚಿತ್ತಾಪುರ; ಸೆ.18**–ಪಟ್ಟಣದ ಬಾಹರಪೇಟ್ ಸಮೀಪದ ಕೊತಲಾಪೂರ ಯಲ್ಲಮ್ಮ ದೇವಸ್ಥಾನದ ಬಾಗಿಲಿನ ಕೀಲಿ ಕೈ ಮುರಿದು ಒಳಗಡೆಯ ದೇವಿಯ ಬೆಳ್ಳಿ ಮೂರ್ತಿಯ ಎರಡು ಕೈಗಳನ್ನು ಕಟ್ ಮಾಡಿ ಕಳ್ಳರು ತೆಗೆದುಕೊಂಡು ಹೋಗಿರುವ ಘಟನೆ ಜರಗಿದೆ. ನವರಾತ್ರಿ ನಿಮಿತ್ತ ದೇವಸ್ಥಾನಕ್ಕೆ ಸುಣ್ಣ ಬಣ್ಣ ಮಾಡಿ ಅಲಂಕಾರ ಕಾರ್ಯ ನಡೆಯುತ್ತಿದೆ ಅದರಂತೆ ಮಂಗಳವಾರ ಕೊನೆ ಹಂತಕ್ಕೆ ತಲುಪಿತ್ತು.

ಉಳಿದ ಕಾರ್ಯ ನಾಳೆ ಮಾಡಿದರಾಯಿತು ಎಂದು ದೇವಸ್ಥಾನದ ಗೇಟ್ ಮುಚ್ಚಿ ಕೀಲಿಕೈ ಹಾಕಿ ಹೋಗಲಾಗಿತ್ತು. ಎಂದಿನಂತೆ ಬುಧವಾರ ಬೆಳಗ್ಗೆ ದೇವಿಯ ಪೂಜೆ ಕಾರ್ಯಕ್ಕೆ ಅರ್ಚಕ ಮಂಜುನಾಥ ಜೀರ್ ಆಗಮಿಸಿದಾಗ ದೇವಸ್ಥಾನ ಗೇಟ್ ಗೆ ಹಾಕಿದ ಕೀಲಿಕೈ ಮುರಿದು ಒಳಗಡೆ ಇರುವ ದೇವಿಯ ಬೆಳ್ಳಿ ಮೂರ್ತಿಯ ಎರಡು ಕೈಗಳನ್ನು ಕಟ್ ಮಾಡಿ ಕಳ್ಳತನ ಆಗಿರುವುದು ಕಂಡುಬಂದಿದೆ ಅಲ್ಲದೇ ಬೆಳ್ಳಿಯ ಕಣ್ಣು ಬಿಟ್ಟು ಹಾಗೂ ಪಾದುಕೆ, ತಾಟ್ ಸಹ ಕಳ್ಳತನ ಆಗಿದೆ ಅಷ್ಟೇ ಅಲ್ಲದೇ ಮೂರ್ತಿಯನ್ನೇ ಕಳ್ಳತನ ಮಾಡುವ ಪ್ರಯತ್ನ ನಡೆದಿದೆ ಎಂದು ತಿಳಿದು ಬಂದಿದೆ.ಸುದ್ದಿ ತಿಳಿಯುತ್ತಿದ್ದಂತೆ ಪಿಎಸ್ಐ ಶ್ರೀಶೈಲ್ ಅಂಬಾಟಿ, ರವಿಕುಮಾರ, ಬಸವರಾಜ ಸೇರಿದಂತೆ ಪೊಲೀಸ್ ಸಿಬ್ಬಂದಿಗಳು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದರು.ಈ ಕುರಿತು ಚಿತ್ತಾಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರೆಸಿದ್ದಾರೆ.

# ಎ ವಿ ಪಾಟೀಲರು ಸದಾಕಾಲ ಸ್ಮರಣೀಯರು– ಮಾಜಿ ಶಾಸಕ ಸುಭಾಷ್ ಗುತ್ತೇದಾರ



ಯುವ ಮಾರ್ಗ ಸುದ್ದಿ

**ಆಳಂದ,ಸೆ.18**–ಕಲ್ಯಾಣ ಕರ್ನಾಟಕ ಪ್ರದೇಶವನ್ನು ನಿಜಾಮರ ಕೈಯಿಂದ ಮುಕ್ತಿಗೊಳಿಸುವಲ್ಲಿ ಆಳಂದ ತಾಲೂಕಿನ ಪಾತ್ರ ಅತ್ಯಂತ ಮಹತ್ವವಾದುದ್ದು ಇದರಲ್ಲಿ ದಿ. ಎ ವಿ ಪಾಟೀಲರು ಸದಾಕಾಲ ಸ್ಮರಣೀಯರು ಎಂದು ಮಾಜಿ ಶಾಸಕ ಸುಭಾಷ್ ಆರ್ ಗುತ್ತೇದಾರ ಅಭಿಪ್ರಾಯಪಟ್ಟರು.

ಬುಧುವಾರ ಆಳಂದ ಪಟ್ಟಣದ ಎಸ್ಆರ್‌ಜಿ ಫೌಂಡೇಶನ್‌ನಲ್ಲಿ ಹಮ್ಮಿಕೊಂಡಿದ್ದ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ದೇಶ ಸ್ವಾತಂತ್ರ್ಯ ಪಡೆದರೂ ದೇಶದ ಕೆಲವು ಭಾಗಗಳಲ್ಲಿ ರಜಾಕರ, ಪಠಾಣರ ಹಾವಳಿ ವೀಪರಿತವಾಗಿತ್ತು ಅವರು ಬಲವಂತದ ಮತಾಂತರ, ಅತ್ಯಾಚಾರ, ಕೊಲೆ, ಸುಲಿಗೆ ದರೋಡೆಯಂತಹ ಪೈಶಾಚಿಕ ಕೃತ್ಯಗಳನ್ನು ಮಾಡುತ್ತಿದ್ದರು. ಕಲ್ಯಾಣ ಕರ್ನಾಟಕ ಭಾಗದಲ್ಲಿ ಬಹುಸಂಖ್ಯಾತ ಹಿಂದುಗಳಿದ್ದರೂ ನಮ್ಮನ್ನು ಆಳುವವರು ಅಲ್ಪಸಂಖ್ಯಾತ ರಾಜರುಗಳಾಗಿದ್ದರು ಅವರು ಈ ಭಾಗವನ್ನು ಸ್ವತಂತ್ರವಾಗಿ ಆಳಲು ನಿರ್ಧರಿಸಿದ್ದರು ಆದರೆ ಸರ್ದಾರ ಪಟೇಲರ ಕ್ಷಿಪ್ರ ಕ್ರಾಂತಿಯಿಂದ ನಿಜಾಮ ಶರಣಾಗಿ ಭಾರತದ ಒಕ್ಕೂಟದೊಳಗೆ ಸೇರಲು ಒಪ್ಪಿದ ಎಂದು ಹೇಳಿದರು.

ವಿಮೋಚನಾ ಚಳುವಳಿಯಲ್ಲಿ ಆಳಂದ ತಾಲೂಕಿನ ಪಾತ್ರ ಅತ್ಯಂತ ಮಹತ್ವವಾದುದ್ದು ಈ ಭಾಗದ ಅನೇಕ ಸ್ವಾತಂತ್ರ್ಯ ಹೋರಾಟಗಾರರು ನಿಜಾಮರ ದಬ್ಬಾಳಿಕೆಯನ್ನು ಮೆಟ್ಟಿ ನಿಂತರು. ಅಲ್ಲಲ್ಲಿ ಶಿಬಿರಗಳನ್ನು ನಡೆಸಿ ಜನರಲ್ಲಿ ವಿಮೋಚನೆಯ ಜಾಗೃತಿಯನ್ನು ಬಿತ್ತಿದರು. ಎ ವಿ ಪಾಟೀಲ, ಗುರು ಭೀಮರಾವ ಪಾಟೀಲ, ಭೈರಪ್ಪ ಪಾಟೀಲ, ದಿಗಂಬರರಾವ ಕಲ್ಮಣಕರ ಸೇರಿದಂತೆ ಅನೇಕರು ಚಳುವಳಿಯ ಮುಂದಾಳತ್ವ ವಹಿಸಿದ್ದರು ಎಂದು ನುಡಿದರು.

ಗ್ರಾಮಗಳಲ್ಲಿರುವ ಹಿಂದು ಸಮುದಾಯದ ಮೇಲೆ ದಾಳಿ ಮಾಡಿ ಜಮೀನುಗಳಲ್ಲಿಯ ಬೆಳೆ ನಾಶ ಮಾಡುವದು, ಮನೆಗಳನ್ನು ಹಾಗು ದೇವಸ್ಥಾನಗಳನ್ನು ಲೂಟಿ ಮಾಡುವದು, ಹೆಂಗಸರ ಮೇಲೆ ಅತ್ಯಾಚಾರಗೈದು ವಿರೂಪಗೊಳಿಸುವದು, ಮಕ್ಕಳು ಮುದುಕರೆನ್ನದೆ ಕಂಡವರನ್ನೆಲ್ಲ ಕತ್ತಿ, ಕೊಡಲಿ, ಬಂದೂಕುಗಳಿಂದ ಹಿಂಸಿಸಿ ಕೊಲ್ಲುವದು, ರಾಷ್ಟ್ರೀಯ ವಿದ್ಯಾಲಯಗಳ ಮೇಲೆ ದಾಳಿ ಮಾಡುವದು ಇವೆಲ್ಲ ಪ್ರಜಾ ಚಳುವಳಿಯನ್ನು ಹತ್ತಿಕ್ಕಲು ರಜಾಕಾರರು ಕಂಡುಕೊಂಡ ತಂತ್ರಗಳಾಗಿದ್ದವು ಎಂದು ಹೇಳಿದರು.

ಆ. 15ರಂದು ಭಾರತ ಸ್ವತಂತ್ರವಾಯಿತು. ಆದರೆ ಆಗ ಭಾರತದೊಡನೆ ವಿಲೀನವಾಗಲು ಬಯಸಿದ ತನ್ನ ಸಂಸ್ಥಾನದ ಬಹುಜನರ ಅಭಿಪ್ರಾಯವನ್ನು ವಿರೋಧಿಸಿದ ಹೈದರಾಬಾದಿನ ನಿಜಾಮ ಮೀರ್ ಉಸ್ಮಾನ್ ಅಲಿ, "ಡೆಕ್ಕನ್ ರೇಡಿಯೋ" (ಅಥವಾ "ನಿಜಾಮ್ ರೇಡಿಯೋ") ಮೂಲಕ ಹೈದರಾಬಾದ ಸಂಸ್ಥಾನವನ್ನು ಸ್ವತಂತ್ರ ರಾಷ್ಟವೆಂದು ಘೋಷಿಸಿದ. ನಿರೀಕ್ಷೆಯಂತೆ ಪಾಕಿಸ್ತಾನವು ಹೈದರಾಬಾದ ಸ್ವತಂತ್ರ ರಾಷ್ಟವೆಂದು ಮಾನ್ಯ ಮಾಡಿದ ಮೊದಲ ದೇಶವಾಯಿತು. ಭಾರತಕ್ಕೆ ಸ್ವಾತಂತ್ರ್ಯ ದೊರೆಯುವ ಹಲವು ವರ್ಷಗಳ ಮೊದಲಿನಿಂದ, ನಿಜಾಮ್ "ಸೋಲರಿಯದ ಅಲ್ಲಾಹುವಿನ ಸೈನಿಕರು" ಎಂದು ಕರೆದು ಕೊಳ್ಳುತ್ತಿದ್ದ ತನ್ನ ಸೇನೆಗೆ ಮತ್ತು ನಿಜಾಂ ಪೋಲಿಸರಿಗೆ ಬ್ರಿಟಿಷರ ಸೇನಾಧಿಕಾರಿಗಳಿಂದ ತರಬೇತಿ ಶಿಬಿರಗಳನ್ನು ನಡೆಸಿದ್ದ ಮತ್ತು ಆಗ ಪ್ರಸಿದ್ಧವಾಗಿದ್ದ ಸಿಡ್ನಿ ಕಾಟನ್ ಬಂದೂಕುಗಳು ಮತ್ತು ಅಪಾರ ಪ್ರಮಾಣದ ಮದ್ದುಗುಂಡುಗಳನ್ನು ಸಂಗ್ರಹಿಸಿದ್ದ. ಆ ಕಾಲಲ್ಲಿ ವಿಶ್ವದ ಗಣನೀಯ ಶ್ರೀಮಂತರಲ್ಲಿ ಒಬ್ಬನಾಗಿದ್ದ ನಿಜಾಮ್ ಮೀರ್ ಉಸ್ಮಾನ್ ಅಲಿಗೆ, ಹೈದರಾಬಾದ ಸಂಸ್ಥಾನವನ್ನು ಸ್ವತಂತ್ರ ರಾಷ್ಟ್ರವೆಂದು ಘೋಷಿಸಲು ಬ್ರಿಟಿಷ್ ಹಾಗು ಪಾಕಿಸ್ತಾನಿ ರಾಜಕಾರಣಿಗಳ ಪ್ರತ್ಯಕ್ಷ ಮತ್ತು ಪರೋಕ್ಷ ಬೆಂಬಲವಿತ್ತು ಎಂದು ತಿಳಿಸಿದರು.

ಬಿ.ಎಡ್ ಕಾಲೇಜು ಪ್ರಾಚಾರ್ಯ ಡಾ. ಅಶೋಕರೆಡ್ಡಿ ಮಾತನಾಡಿ, ಭಾರತದೊಡನೆ ವಿಲೀನಗೊಳ್ಳುವ ಉದ್ದೇಶದಿಂದ ಹೈದರಾಬಾದ ಪ್ರಜೆಗಳು ಗಾಂಧೀ ಪ್ರಣೀತ ಅಹಿಂಸಾತ್ಮಕ ಚಳುವಳಿ ಪ್ರಾರಂಭಿಸಿದ್ದರು. ಇದರ ನೇತೃತ್ವವನ್ನು ಸಂಸ್ಥಾನ ಕಾಂಗ್ರೆಸ್ ಮುಖಂಡರಾದ ಸ್ವಾಮಿ ರಾಮಾನಂದ ತೀರ್ಥರು ವಹಿಸಿದ್ದರು. ಈ ಚಳುವಳಿಯನ್ನು ಹತ್ತಿಕ್ಕಲು ನಿಜಾಮನು ತನ್ನ ಪೋಲೀಸ್ ಬಲವನ್ನು ಅತ್ಯಂತ ಕ್ರೂರವಾಗಿ ಉಪಯೋಗಿಸಿದನು. ಇದಲ್ಲದೆ, ತನ್ನ ವಿರೋಧಿಗಳನ್ನು ಸಂಪೂರ್ಣವಾಗಿ ನಾಶ ಮಾಡಲು ಕಾಸಿಂ ರಜವಿ ಎಂಬ ಭಯೋತ್ಪಾದಕನ ನೇತ್ರತ್ವದಲ್ಲಿ ರಜಾಕಾರ ಹೆಸರಿನ ಭಯೋತ್ಪಾದಕರ ಪಡೆಯನ್ನು ಕೂಡಾ ನಿಸ್ಸಹಾಯಕ ಪ್ರಜೆಗಳ ಮೇಲೆ ದಾಳಿಗಿಳಿಸಿದನು ಎಂದು ಇತಿಹಾಸ ವಿವರಿಸಿದರು.

ವಿಕೆಜಿ ಪದವಿ ಕಾಲೇಜು ಪ್ರಾಚಾರ್ಯ ಕಲ್ಯಾಣಿ ಸಾವಳಗಿ ಮಾತನಾಡಿ, ಕಾಸಿಂ ರಜವಿ ಈಗ ಮಹಾರಾಷ್ಟ್ರ ರಾಜ್ಯದಲ್ಲಿರುವ ಲಾತೂರಿನಲ್ಲಿ ಒಬ್ಬ ಮಾಮೂಲಿ ವಕೀಲನಾಗಿದ್ದ. ಈತ ಉಗ್ರವಾದಿ ಸಂಘಟನೆ'ಇತಿಹಾದುಲ್ ಮುಸಲ್ಮಾನ್'ದ ಅಧ್ಯಕ್ಷನಾಗಿದ್ದ ಕೂಡಾ. ನಿಜಾಮನು ಹೈದರಾಬಾದ ಸಂಸ್ಥಾನವನ್ನು ಸ್ವತಂತ್ರ ರಾಷ್ಟವೆಂದು ಘೋಷಿಸಿದ ದಿನದಂದು, ಈ ರಜಾಕಾರರು, ವಿಶೇಷವಾಗಿ ಹೈದರಾಬಾದಿನಲ್ಲಿ ಸಾವಿರಾರು ಜನ ಅಮಾಯಕರ ಮೇಲೆ ದಾಳಿಯಿಟ್ಟು ಲೂಟಿ, ಅತ್ಯಾಚಾರ, ದೌರ್ಜನ್ಯ ನಡೆಸಿದರು. ಇಂದಿನ ತೆಲಂಗಾಣ ಪ್ರದೇಶ, ದಕ್ಷಿಣ ಮಹಾರಾಷ್ಟ್ರ ಮತ್ತು ಹೊಸಪೇಟೆಯ ಬಳಿಯಿರುವ ತುಂಗಭದ್ರಾ ತೀರದವರೆಗೆ ವಿಸ್ತರಿಸಿದ್ದ. ಹೈದರಾಬಾದ ಸಂಸ್ಥಾನದ ಜನ, 18 ಸೆಪ್ಟೆಂಬರ್ 1948 ಸಂಜೆ ಆರು ಗಂಟೆಯವರೆಗೆ ನಿರಂತರವಾಗಿ ಹಿಂಸೆ, ಕೊಲೆ, ಸುಲಿಗೆ ಮತ್ತು ದೌರ್ಜನ್ಯಕ್ಕೆ ಸಿಲುಕಿದರೂ, ಭಾರತದೊಡನೆ ಹೈದರಾಬಾದ ಸಂಸ್ಥಾನದ ವಿಲೀನಕ್ಕಾಗಿ ಹೋರಾಡಿದ್ದರು ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಡಾ. ಅಪ್ಪಾಸಾಬ ಬಿರಾದಾರ, ಜ್ಯೋತಿ ವಿಶಾಕ್ ಸೇರಿದಂತೆ ಸಂಸ್ಥೆಯ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಎಸ್ ಆರ್ ಜಿ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಕಾರ್ಯಕ್ರಮ ನಿರ್ವಹಿಸಿದರು.

# ಬೆಂಗಳೂರಿಗ ಗುಂಡಿಯೂರು ಎಚ್‌ಡಿಕೆ ವ್ಯಂಗ್ಯ

**ಬೆಂಗಳೂರು ಸೆ.18**– ನಾಡಪ್ರಭು ಕೆಂಪೇಗೌಡರು ಕಟ್ಟಿದ ಹೆಮ್ಮೆಯ ಬೆಂಗಳೂರು ನಗರದ ಪ್ರತಿಷ್ಠೆಗೆ ಘೋರ ಪೆಟ್ಟು ಬಿದ್ದಿದೆ. ಬೆಂಗಳೂರು ಈಗ ಗುಂಡಿಯೂರು ಆಗಿ ಕುಖ್ಯಾತಿ ಆಗುತ್ತಿರುವುದು ದುರ್ದೈವ ಎಂದು ಕೇಂದ್ರ ಸಚಿವ ಎಚ್ ಡಿ ಕುಮಾರಸ್ವಾಮಿ ಹೇಳಿದ್ದಾರೆ

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಟ್ವೀಟ್ ಮಾಡಿರುವ ಅವರುಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಇಬ್ಬರು ಈ ಅಪಮಾನಕ್ಕೆ ಹೊಣೆಗಾರರು. ಬೆಂಗಳೂರು ಮತ್ತು ಕರ್ನಾಟಕ ಇವತ್ತು ಅದಕ್ಷರು, ಭ್ರಷ್ಟರ ಕೈಯ್ಯಲ್ಲಿ ಸಿಕ್ಕಿ ನರಳುತ್ತಿವೆ. ಹೆಜ್ಜೆ ಹೆಜ್ಜೆಗೂ ಸಾವಿನ ಗುಂಡಿ. ಕಂಡಲ್ಲೆಲ್ಲ ಕಸದ ರಾಶಿ. ಗ್ರೇಟರ್ ಬೆಂಗಳೂರು ಎಂದರೆ ಇದೇನಾ ಜಿಬಿಎ ಏನು ಮಾಡುತ್ತಿದೆ ಜನರ ತೆರಿಗೆ ದುಡ್ಡು ನುಂಗಿ ಗೊರಕೆ ಹೊಡೆಯುತ್ತಿದೆಯಾ ಎಂದು ಪ್ರಶ್ನಿಸಿದ್ದಾರೆ

ಬೆಂಗಳೂರಿನಲ್ಲಿ ಆಡಳಿತದ ಘೋರ ವೈಫಲ್ಯವಾಗಿದೆ ಎಂದು ಉದ್ಯಮಿಗಳು ದೂರಿರುವುದು ಸರಿ ಇದೆ. ಅಂಗೈ ಹುಣ್ಣಿಗೆ ಕನ್ನಡಿ ಬೇಕಿಲ್ಲ. ಉದ್ಯಮಿಗಳು ಸರಕಾರದ ವೈಫಲ್ಯವನ್ನು ಇಷ್ಟು ಕಠಿಣವಾಗಿ ಎತ್ತಿ ತೋರಿಸಿರುವುದು ಇತಿಹಾಸದಲ್ಲಿ ಇದೇ ಮೊದಲು. ಈ ಸರಕಾರಕ್ಕೆ ಎಳ್ಳಷ್ಟೂ ಸಂಕೋಚ, ಆತ್ಮಾಭಿಮಾನವಿಲ್ಲ. ಕನ್ನಡಿಗರ ಸ್ವಾಭಿಮಾನವನ್ನು ಗುಂಡಿಪಾಲು ಮಾಡಿದೆ ಎಂದು ಟೀಕಿಸಿದ್ದಾರೆ.

ತೆರಿಗೆ ಹಾಕುವುದರಲ್ಲಿ ಸರಕಾರದ್ದು ರಾಕೆಟ್ ವೇಗ. ಗುಂಡಿ ಮುಚ್ಚುವುದರಲ್ಲಿ ಕೊನೇಪಕ್ಷ ಆಮೆ ವೇಗವೂ ಇಲ್ಲ. ಕೊಳ್ಳೆ ಹೊಡೆಯುವುದರಲ್ಲಿ ಇರುವ ಉನ್ಮಾದ, ಅಭಿವೃದ್ಧಿಯತ್ತ ವಿಪರೀತ ಉಪೇಕ್ಷೆ. ಚುನಾವಣಾ ಗ್ಯಾರಂಟಿಗಳಿಗೆ ರಾಜ್ಯದ ಅಭಿವೃದ್ಧಿ ಬಲಿಯಾಗಿ ಗ್ರೇಟರ್ ಬೆಂಗಳೂರು ಗಬ್ಬೆದ್ದು ನಾರುತ್ತಿದೆ! ಎಂದು ಕಿಡಿ ಕಾರಿದ್ದಾರೆ



ಗುಂಡಿ ಮುಚ್ಚುವುದಕ್ಕೆ ಬಿಡಿಗಾಸಿಲ್ಲದ ಸರಕಾರ ಜನರಿಂದ ಕಿತ್ತುಕೊಳ್ಳುತ್ತಿರುವ ತೆರಿಗೆ ಹಣ ಏನು ಮಾಡುತ್ತಿದೆ ಅದು ಯಾರ ಕಿಸೆ ಸೇರುತ್ತಿದೆ ಇದಕ್ಕೆ ಉತ್ತರ ಬೇಕು.

ಕಂಪನಿಗಳು ರಾಜ್ಯ ಸರಕಾರದ ಮೇಲೆ ಭರವಸೆ ಕಳೆದುಕೊಂಡು ನೆರೆರಾಜ್ಯಗಳತ್ತ ವಲಸೆ ಹೋಗುತ್ತಿವೆ. ಆ ರಾಜ್ಯಗಳು ಇಂಥ ಸಮಯಕ್ಕೇ ಕಾಯುತ್ತಾ ರಿಯಾಯ್ತಿ ಮೇಲೆ ರಿಯಾಯ್ತಿಗಳನ್ನು ನೀಡುತ್ತಿವೆ. ಭಂಡ ಸರಕಾರಕ್ಕೆ ಅರ್ಥವಾಗುತ್ತಿಲ್ಲ. ಈ ಸರಕಾರದ ಪಂಚೇಂದ್ರಿಯಗಳು ನಿಷ್ಕ್ರಿಯವಾಗಿವೆ. ಎಂದಿದ್ದಾರೆ

ನೀವು ಬೆಂಗಳೂರು ಬಿಡುವುದು ಬೇಡ. ಈ ನಗರಕ್ಕೆ ಮಹಾನ್ ಪರಂಪರೆ, ಹಿನ್ನೆಲೆ ಇದೆ. ಈ ಎಮ್ಮೆ ಚರ್ಮದ ಸರಕಾರಕ್ಕೆ ಪಾಠ ಕಲಿಸುತ್ತೇವೆ. ನಿಮ್ಮ ಜತೆ ನಾವು, ಇಡೀ ಕರ್ನಾಟಕದ ಜನತೆ ಇದ್ದೇವೆ. ಹೋಗುತ್ತೇವೆ ಎನ್ನುವ ಮಾತನ್ನು ಮನಸ್ಸಿನಿಂದ ತೆಗೆದುಬಿಡಿ. ನಾವೆಲ್ಲರೂ ಸೇರಿ ಬೆಂಗಳೂರು ನಗರವನ್ನು ಬದಲಿಸೋಣ. ಎಂದು ಕುಮಾರಸ್ವಾಮಿ ಕರೆ ನೀಡಿದ್ದಾರೆ

# ಮಕ್ಕಳ ಭವಿಷ್ಯ ರೂಪಿಸುವ ಶಿಕ್ಷಕ ಹೀಗಿರಲಿ

ಅದೊಂದು ಶಾಲೆ. ಆ ಶಾಲೆಯಲ್ಲಿ ಶಾಲೆ ಮುಗಿಯುವ ಸಮಯಕ್ಕೆ ಹೊಡೆಯುವ ಘಂಟೆಯ ಶಬ್ದಕ್ಕೆ ಎಲ್ಲ ಶಿಕ್ಷಕರು ಧಾವಿಸಿ ಮನೆಗೆ ಓಡುವ ಧಾವಂತದಲ್ಲಿ ಇದ್ದರೆ ಕೇವಲ ಓರ್ವ ವ್ಯಕ್ತಿ ಮಾತ್ರ ಆರಾಮಾಗಿ ಇರುತ್ತಿದ್ದರು.

ವಿದ್ಯಾರ್ಥಿಗಳು ಕೂಡ ಮನೆಗೆ ಓಡುವ ಆತುರದಲ್ಲಿ ಇರುತ್ತಿದ್ದರು. ಆದರೆ ಅದೊಬ್ಬ ವಿದ್ಯಾರ್ಥಿ ಮಾತ್ರ ತನ್ನ ಗುರುಗಳು ಹೀಗೇಕೆ ಶಾಲೆಯಲ್ಲಿಯೇ ಉಳಿದುಕೊಳ್ಳಲು ಬಯಸುತ್ತಾರೆ ಎಂಬುದನ್ನು ತಿಳಿಯುವ ಕಾತುರದಿಂದ ಆ ದಿನ ಶಾಲೆ ಬಿಟ್ಟೊಡನೆ ಮನೆಯತ್ತ ಧಾವಿಸಲಿಲ್ಲ, ಬದಲಾಗಿ ಶಾಲೆಯ ಹೊರ ಆವರಣದಲ್ಲಿ ಯಾರೋ ಬಂದು ತನ್ನನ್ನು ಕರೆದೊಯ್ಯುವರು ಎಂಬ ರೀತಿಯಲ್ಲಿ ಕಾಯುತ್ತಾ ನಿಂತುಕೊಂಡ. ಆ ಶಿಕ್ಷಕರಿಗೂ ಕೂಡ ಆ ಬಾಲಕ ಅವರನ್ನು ಹಿಂಬಾಲಿಸಬಲ್ಲ ಎಂಬ ಸುಳಿವೇ ಸಿಗದಂತೆ ಆತನ ವರ್ತನೆ ಇತ್ತು. ಪ್ರತಿಯೊಂದು ತರಗತಿಯ ಕೋಣೆಗಳು ಖಾಲಿಯಾದವು.ಶಾಲೆಯ ಕಾರಿಡಾರುಗಳಲ್ಲಿ ಮಕ್ಕಳ ಸಂಖ್ಯೆ ಇಳಿಮುಖವಾಗುತ್ತಾ ಕ್ರಮೇಣ ಎಲ್ಲವೂ ಶಾಂತವಾಯಿತು.ಇದೀಗ ಆ ಶಿಕ್ಷಕರು ಎರಡು ಕುರ್ಚಿಗಳನ್ನು ತಂದು ಹೊರಗೆ ಹಾಕಿಕೊಂಡರು. ಯಾವಾಗಲೂ ಶಾಲೆಗೆ ತಾವು ತಂದಿರುತ್ತಿದ್ದ ಪುಟ್ಟ ಬ್ಯಾಗನ್ನು ಕುರ್ಚಿಯ ಮೇಲಿಟ್ಟು ಅದನ್ನು ತೆರೆದು ಅದರಿಂದ ಹಳೆಯ ಡೈರಿಯನ್ನು ಹೊರಗೆ ತೆಗೆದರು.

ಕಂದು ಬಣ್ಣದ ಹೊರ ಆವರಣವನ್ನು ಹೊಂದಿದ್ದ ಆ ಡೈರಿಯನ್ನು ತೆಗೆದು ಡೆಸ್ಕ್ ನ ಮೇಲೆ ಕುಳಿತುಕೊಂಡು ಅದರಲ್ಲಿ ಬರೆಯಲಾರಂಭಿಸಿದರು.ವಿದ್ಯಾರ್ಥಿಗೆ ತುಸು ಸೋಜಿಗವಾಯಿತು. ಅದು ತಮ್ಮ ತರಗತಿಯ ಹಾಜರಿ ಪುಸ್ತಕವಾಗಿರಲಿಲ್ಲ. ಪ್ರತಿ ಬಾರಿಯೂ ತೆಗೆದುಕೊಳ್ಳುವ ಪರೀಕ್ಷೆಯ ಅಂಕಗಳನ್ನು ನಮೂದಿಸುವ ಪುಸ್ತಕವು ಕೂಡ ಅದಾಗಿರಲಿಲ್ಲ.... ಹಾಗಾದರೆ ಗುರುಗಳು ಏನನ್ನು ಬರೆಯುತ್ತಿದ್ದಾರೆ ಎಂಬ ಕುತೂಹಲ ಆತನಲ್ಲಿ ಸಮಯ ಕಳೆದಂತೆ ಹೆಚ್ಚಾಯಿತು

ಅದೇ ಸಮಯದಲ್ಲಿ ಶಾಲೆಯ ಕಾರ್ಯದರ್ಶಿ ಹೆಡ್ ಮಾಸ್ತರರ ಕೋಣೆಯಿಂದ ಈ ಶಿಕ್ಷಕರಿಗೆ ಕರೆ ಕಳುಹಿಸಿದರು. ಬರೆಯುತ್ತಿದ್ದ ಡೈರಿಯನ್ನು ಹಾಗೆಯೇ ಬಿಟ್ಟು ಆ ಶಿಕ್ಷಕ ತರಗತಿಯ ಕೋಣೆಯಿಂದ ಹೊರಟುಹೋದರು ಹೆಡ್ ಮಾಸ್ತರರ ಕೋಣೆಗೆ ಶಿಕ್ಷಕರು ಹೋಗುವುದನ್ನೇ ಕಾಯುತ್ತಿದ್ದ ಬಾಲಕ ನಿಧಾನವಾಗಿ ಯಾರಿಗೂ ಕಾಣದಂತೆ ಡೆಸ್ಕ್ ನ ಬಳಿ ಬಂದು ನಿಂತನು. ಡೈರಿಯ ಮೇಲೆ ಕಣ್ಣಾಡಿಸಿದನು.

.–ವಾರಗಳ ನಂತರ ವಿಮಲ ತನ್ನ ಕೈಯನ್ನು ಮೊದಲ ಬಾರಿಗೆ ಎತ್ತಿದಳು

–ಜಯಂತ ಮೊತ್ತ ಮೊದಲ ಬಾರಿಗೆ ಯಾವುದೇ ತಪ್ಪಿಲ್ಲದಂತೆ ಪಠ್ಯದ ಒಂದು ಇಡೀ ಪ್ಯಾರಾ ಓದಿದ. ಈ ಕುರಿತು ಆತನನ್ನು ನಾನು ಪ್ರಶಂಸಿಸಿದಾಗ ಆತನ ಮುಖದಲ್ಲಿ ಮಂದಹಾಸ ಮೂಡಿತು.

–ದಯಾನಂದನ ಗಮನ ತರಗತಿ ಕೋಣೆಯ ಹೊರಗೆ ಇತ್ತು ಮುಂದಿನ ಬಾರಿ ಆತನ ಕುರಿತು ಮತ್ತಷ್ಟು ಗಮನಹರಿಸಬೇಕು ಎಂದೆಲ್ಲಾ ಬರೆದದ್ದು ಕಂಡಿತು.

ಪುಟದ ಕೊನೆಯಲ್ಲಿ ತನ್ನ ಹೆಸರನ್ನು ಕಂಡ ಬಾಲಕ ಕಾತರದಿಂದ ಓದಲ ಆರಂಭಿಸಿದ.–ಮಹಾಂತೇಶ ಇಂದು ಯಾರಿಗೋ ಕಾಯುತ್ತಿರುವ ನೆವ ದಿಂದ ಶಾಲೆಯಲ್ಲಿಯೇ ಉಳಿದುಕೊಳ್ಳುತ್ತಿದ್ದಾನೆ... ಆತನ ಕುತೂಹಲ ಮೇರೆ ಮೀರಿದೆ... ನಿಜವಾಗಿಯೂ ಇದು ಒಳ್ಳೆಯ ತೆರೆದುಕೊಳ್ಳುವಿಕೆ ಮುಂದಿನ ದಿನಗಳಲ್ಲಿ ಆತನ ಕುರಿತು ಇನ್ನಷ್ಟು ಕಾಳಜಿ ವಹಿಸಬೇಕು ಎಂಬ ಬರಹವನ್ನು ನೋಡಿ ಬಾಲಕ ಉಗುಳು ನುಂಗಿಕೊಂಡ. ಅರೆ! ನಾನು ಬೇಕೆಂದೆ ತರಗತಿಯ ಕೋಣೆಯಲ್ಲಿ ಉಳಿದುಕೊಂಡಿದ್ದು ಈ ಶಿಕ್ಷಕರಿಗೆ ಹೇಗೆ ಗೊತ್ತಾಯ್ತು ಎಂದು ಆತನಿಗೆ ಸೋಜಿಗವಾಯಿತು. ಗುರುಗಳು ತನ್ನನ್ನು ಗಮನಿಸುತ್ತಿದ್ದಾರೆ ಎಂಬುದೇ ಆತನ ಸಂತಸಕ್ಕೆ ಕಾರಣವಾಯಿತು.

ನೀನು ಇದನ್ನು ಓದಿದೆಯಾ? ಎಂಬ ದನಿ ಕೇಳಿ ಆತ ಹಿಂದೆ ತಿರುಗಿ ನೋಡಿದ. ಅಲ್ಲಿ ಶಿಕ್ಷಕರು ನಸುನಗುತ್ತಾ ನಿಂತಿದ್ದರು. ನಿಧಾನವಾಗಿ ಪುಸ್ತಕವನ್ನು ಮುಚ್ಚುತ್ತಾ ಈ ರೀತಿ ಪ್ರತಿದಿನ ಮಕ್ಕಳ ಕುರಿತು ನಾನು ಕೆಲವು ವಿಷಯಗಳನ್ನು ಬರೆಯುತ್ತೇನೆ... ಎಲ್ಲವನ್ನು ಕಡ್ಡಾಯವಾಗಿ ನೆನಪಿನಲ್ಲಿ ಇಟ್ಟುಕೊಳ್ಳಬೇಕು ಎಂದು ನಾನು ಬಯಸುತ್ತೇನೆ ಅದು ಮರೆತು ಹೋಗಬಾರದು ಎಂಬ ಕಾರಣಕ್ಕಾಗಿ ಹೀಗೆ ಬರೆಯುತ್ತೇನೆ ಎಂದು ಹೇಳಿ ಅವರು ತಮ್ಮ ಮಾತನ್ನು ನಿಲ್ಲಿಸಿದರು.

ಮತ್ತೆ ಮುಂದುವರಿಸಿ ಹೀಗೆ ಮಕ್ಕಳ ಕಡೆ ಗಮನವಿಟ್ಟು ಅವರ ಅಭ್ಯಾಸಗಳನ್ನು ನಾವು ನೋಡಿದಾಗ ಅವರ ಕುರಿತು ಹೆಚ್ಚಿನ ಮಾಹಿತಿ ದೊರೆಯುತ್ತದೆ. ಎಷ್ಟೋ ಬಾರಿ ಕೆಲವರು ಎಲ್ಲ ಗೊತ್ತಿದ್ದು ಉತ್ತರ ಹೇಳಲು ಹಿಂಜರಿಯುತ್ತಾರೆ, ಆಟ ಪಾಠಗಳಲ್ಲಿ ಭಾಗವಹಿಸುವುದಿಲ್ಲ ಪಠ್ಯೇತರ ಚಟುವಟಿಕೆಗಳಿಂದ ದೂರವೇ ಉಳಿಯುತ್ತಾರೆ ಮತ್ತೆ ಕೆಲ ಮಕ್ಕಳು ಕೀಟಲೆ ಮಾಡಿಯೂ ಏನೂ ಗೊತ್ತಿಲ್ಲದ ಮಳ್ಳರಂತೆ ಸುಮ್ಮನೆ ಕುಳಿತುಕೊಳ್ಳುತ್ತಾರೆ. ಮತ್ತೆ ಕೆಲವೊಮ್ಮೆ ಅವರನ್ನು ಪ್ರೀತಿಯಿಂದ ಮಾತನಾಡಿಸಿದಾಗ ನಿಧಾನವಾಗಿ ಎಲ್ಲರೊಂದಿಗೆ ಬೆರೆಯಲು ಆರಂಭಿಸುತ್ತಾರೆ ಎಂದು ತನಗೆ ತಾನೆ ಹೇಳಿಕೊಳ್ಳುವಂತೆ ಶಿಕ್ಷಕರು ಮುಂದುವರೆಸಿದರು.

ನಮ್ಮಂತಹ ಶಿಕ್ಷಕರು ಬಹಳಷ್ಟು ಬಾರಿ ಮಕ್ಕಳು ಕೇವಲ ಕಲಿಯಲು ಶಾಲೆಗೆ ಬರುತ್ತಾರೆ ಎಂದು ಭಾವಿಸುತ್ತೇವೆ. ಆದರೆ ಎಷ್ಟೋ ಬಾರಿ ಮಕ್ಕಳು ಬಾಯಿಂದ ಹೇಳಲು ಸಾಧ್ಯವಾಗದ ಎಷ್ಟೋ ವಿಷಯಗಳನ್ನು ತಮ್ಮ ತಲೆಯಲ್ಲಿ ತುರುಕಿಕೊಂಡು ತರಗತಿಯ ಕೋಣೆಯಲ್ಲಿ ಬಂದು ಕುಳಿತಿರುತ್ತಾರೆ. ಅಂತಹ ಮಕ್ಕಳ ಭಾವನೆಗಳನ್ನು ಅವರು ಹೇಳದೆಯೇ ಅರಿತುಕೊಂಡು ಅವುಗಳಿಗೆ ಪರಿಹಾರ ಹುಡುಕುವುದು ಶಿಕ್ಷಕರಾದ ನಮ್ಮ ಕರ್ತವ್ಯ... ನೀನೇನಂತಿಯ? ಎಂದು ಹೇಳಿ ಆ ಬಾಲಕನ ಬೆನ್ನು ತಟ್ಟಿ ಪ್ರಶ್ನಾರ್ಥಕವಾಗಿ ನೋಡಿದರು.

ಶಾಲೆಯ ಯಾವುದೇ ಪಠ್ಯ ಪುಸ್ತಕದಲ್ಲಿಯೂ ಆ ಪಾಠ ಇರಲಿಲ್ಲವಾದರೂ ಆ ಬಾಲಕನಿಗೆ ಕಲಿಸದೆಯೇ ಒಂದು ಹೊಸ ಪಾಠದ ಅರಿವಾಯಿತು. ಕಲಿಕೆ ಎಂಬದು ತರಗತಿ ಕೋಣೆಯಲ್ಲಿ ಮಾತ್ರವಲ್ಲ. ಪಠ್ಯದ ವಿವರಣೆ ಕೊಡುವುದು ಮಾತ್ರ ಕಲಿಕೆಯಲ್ಲ, ಪರೀಕ್ಷೆಯನ್ನು ತೆಗೆದುಕೊಂಡು ಮಕ್ಕಳ ಉತ್ತರಗಳಿಗೆ ಅಂಕಗಳನ್ನು ಕೊಡುವುದು ಕೂಡ ಕಲಿಕೆಯ ಭಾಗವಲ್ಲ. ನಿಜವಾದ

ಕಲಿಕೆ ಮಕ್ಕಳ ಮೇಲೆ ಗಮನವಿಟ್ಟು ಅವರ ಮಾತುಗಳನ್ನು ಹೆಚ್ಚು ಆಲಿಸುವುದು ಅದರಲ್ಲೂ ಅವರು ಹೇಳುವ ಮಾತಿಗಿಂತ ಹೇಳದೆ ಉಳಿಸಿದ ಮಾತುಗಳನ್ನು ಅರಿತುಕೊಳ್ಳುವುದು ಕಲಿಸುವಿಕೆಯ ಒಂದು ಭಾಗ ಎಂಬುದು ಆ ಬಾಲಕನಿಗೆ ಮನದಟ್ಟಾಯಿತು.

ಹೌದಲ್ವೆ ಸ್ನೇಹಿತರೆ? ಮೇಲಿನ ಈ ಕಥೆಯ ಸಾರ ನೂರು ಪ್ರತಿಶತ ನಿಜ. ಪ್ರತಿಯೊಂದು ಮಗುವಿನಲ್ಲೂ ಒಂದು ಕಥೆ ಇರುತ್ತದೆ. ಎಲ್ಲ ಮಕ್ಕಳು ಕೂಡ ತಮ್ಮದೇ ಆದ ಸಮಸ್ಯೆಗಳೊಂದಿಗೆ ಒದ್ದಾಡುತ್ತಿರುತ್ತಾರೆ. ಎಷ್ಟೋ ಬಾರಿ ಅವರ ಮಾತುಗಳನ್ನು ಅಯ್ಯೋ! ಸಣ್ಣ ಮಕ್ಕಳು ಅವರಿಗೇನು ತಿಳಿಯುತ್ತೆ ಎಂದು ಹೇಳುವ ಮೂಲಕ ಕೇಳಿಸಿಕೊಳ್ಳದೆ ಹೋಗುವ ಪಾಲಕರು ಮತ್ತು ಶಿಕ್ಷಕರ ನಡುವೆ ನಮ್ಮ ಕಥೆಯ ಶಿಕ್ಷಕ ವಿಭಿನ್ನವಾಗಿ ಕಾಣುತ್ತಾನೆ.

ಶಿಕ್ಷಕರು ಇರಬೇಕಾಗಿರುವುದು ಹಾಗೆಯೇ. ಮಕ್ಕಳು ಹೇಳಿಕೊಳ್ಳುವ ಭಾವನೆಗಳಿಗಿಂತ ಅವರ ಹೇಳದೆ ಉಳಿದ ಮಾತುಗಳಲ್ಲಿ ಅವರ ಮುಂದಿನ ಬದುಕಿನ, ಭವಿಷ್ಯದ ಮುನ್ನುಡಿ ಅಡಗಿರುತ್ತದೆ. ಅವರ ನಾಡಿಮಿಡಿತವನ್ನು ಅರಿತು ಸೂಕ್ತ ಸಮಯದಲ್ಲಿ ತಪ್ಪು ಸರಿಗಳ ಅರಿವನ್ನು ಮೂಡಿಸಿ ಉತ್ತಮ ಮಾರ್ಗದಲ್ಲಿ ಚಲಿಸಲು ಪ್ರೋತ್ಸಾಹಿಸುವ ಮೂಲಕ ಮಕ್ಕಳನ್ನು ಭವಿಷ್ಯದ ನಾಗರಿಕರನ್ನಾಗಿ ರೂಪಿಸುವ ಶಿಕ್ಷಕರು ಪ್ರಸ್ತುತ ಜೀವನದ ಅವಶ್ಯಕತೆ.ಅಂತಹ ಶಿಕ್ಷಕರ ಸಂಖ್ಯೆ ಇನ್ನೂ ಹೆಚ್ಚಾಗಲಿ ಎಂಬ ಹಾರೈಸುವ

**–ವೀಣಾ ಹೇಮಂತ್ ಗೌಡ ಪಾಟೀಲ್,**

**ಮುಂಡರಗಿ, ಗದಗ್**

ಯುವ ಮಾರ್ಗ

ಶುಕ್ರವಾರ : 19–09–2025

## ಬಿ. ಯದ್ಲಾಪೂರ ಗ್ರಾಮಕ್ಕೆ ಕಾರ್ಯನಿರ್ವಾಹಕ ಅಧಿಕಾರಿಗಳು ಭೇಟಿ



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.18–**ಜಿಲ್ಲೆಯ ರಾಯಚೂರು ತಾಲೂಕಿನ ಬಿಚ್ಚಾಲಿ ಗ್ರಾಮ ಪಂಚಾಯತಿಗೆ ಚಂದ್ರಶೇಖರ್ ಪವಾರ್ ಕಾರ್ಯನಿರ್ವಾಹ ಅಧಿಕಾರಿ ತಾಲೂಕ ಪಂಚಾಯತ್ ರಾಯಚೂರು ರವರು ಭೇಟಿ ನೀಡಿ ಪರಿಶೀಲನೆ ಮಾಡಿದರು.

ಬುಧವಾರ ತಾಲೂಕಿನ ಬಿಚ್ಚಾಲಿ ಗ್ರಾಮ ಪಂಚಾಯತಿಯ ಬಿ.ಯದ್ಲಾಪೂರು ಗ್ರಾಮದ ಎಲ್ಲಾ ಏರಿಯಾಗಳಿಗೆ ತೆರಳಿ, ಮಳೆಯಿಂದಾಗಿ ರಸ್ತೆಯ ತಗ್ಗು ಪ್ರದೇಶಗಳಲ್ಲಿ ನೀರು ನಿಂತಿರುವ ಬಗ್ಗೆ ಪರಿಶೀಲಿಸಿ, ಮನೆಗೆ ಇಂಗು ಗುಂಡಿ ನಿರ್ಮಾಣ ಮಾಡಿಕೊಳ್ಳಲು ಸಲಹೆ ನೀಡಿದರು. ಜೆಜೆಎಮ್ ಯೋಜನೆಯಡಿ ಮನೆ ಮನೆಗೆ ನಳಗಳಲ್ಲಿ ನೀರು ಬರುವುದನ್ನು ಪರಿಶೀಲನೆ ಮಾಡಿದರು. ನಂತರ ಮಿನಿ ವಾಟರ್ ಟ್ಯಾಂಕ್ ನ್ನು ವೀಕ್ಷಣೆ ಮಾಡಿದರು.

ಸ್ವಚ್ಚತೆಯೇ ಸೇವಾ ಕಾರ್ಯಕ್ರಮ ಇಂದಿನಿಂದ ಆರಂಭವಾಗಿದೆ. ಎಲ್ಲಾ ಗ್ರಾಮಗಳಲ್ಲಿ ಸ್ವಚ್ಚತಾ ಕಾರ್ಯಕ್ರಮ ಹಮ್ಮಿಕೊಂಡು ಗ್ರಾಮವನ್ನು ಸ್ವಚ್ಛ ಹಾಗೂ ಸುಂದರ ಗ್ರಾಮಗಳನ್ನಾಗಿ ಮಾಡಲು ಹಾಜರಿದ್ದ ಸಿಬ್ಬಂದಿಯವರಿಗೆ ಸೂಚನೆ ನೀಡಿದರು. ಗ್ರಾಮಕ್ಕೆ ಶಾಲೆಯ ಮಕ್ಕಳಿಗಾಗಿ ಹಾಗೂ ಸಾರ್ವಜನಿಕರಿಗೆ ಬಸ್ಸಿನ ವ್ಯವಸ್ಥೆ ಕಲ್ಪಿಸಿಕೊಡುವಂತೆ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಗ್ರಾಮಸ್ಥರು ಮನವಿ ಮಾಡಿದರು.

ಈ ಸಂದರ್ಭದಲ್ಲಿ: ಶ್ರೀ ಶಿವಪ್ಪ ಸಹಾಯಕ ನಿರ್ದೇಶಕರು (ಪಂ.ರಾಜ್) ತಾ.ಪಂ ರಾಯಚೂರು, ಶ್ರೀ ಭೀಮರಾಯ ತಾ.ಪಂ ಸಿಬ್ಬಂದಿಯವರು, ಜಯರಾಜ ಇನ್ ಗ್ರೇಡ್ ಗ್ರಾ.ಪಂ ಸದಸ್ಯರಾದ ಜಯಶೀಲಾ, ಹರ್ಷಪ್ಪ ಗ್ರಾಮದ ಹಿರಿಯರು, ಗ್ರಾ.ಪಂ DEO ಕೃಷ್ಣ BFT ಇಮಾನುವೇಲ್ ಹಾಗೂ ಸಿಬ್ಬಂದಿಯವರು, ಮತ್ತು ಗ್ರಾಮಸ್ಥರು ಹಾಜರಿದ್ದರು.

## 78ನೇ ಕಲ್ಯಾಣ ಕರ್ನಾಟಕ ವಿಮೋಚನೆ ಅದ್ದೂರಿ ಆಚರಣೆ




ಯುವ ಮಾರ್ಗ ಸುದ್ದಿ

**ದೇವದುರ್ಗ,ಸೆ.18–** ಗಬ್ಬೂರು ಗ್ರಾಮ ಪಂಚಾಯಿತಿಯಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಮತ್ತು ದೇವಶಿಲ್ಪಿ ವಿಶ್ವಕರ್ಮರ ಜಯಂತಿಯನ್ನು ಅರ್ಥ ಪೂರ್ಣವಾಗಿ ಆಚರಿಸಲಾಯಿತು. ಗಬ್ಬೂರು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಪಾರ್ವತಿ ಬುಸ್ಸಪ್ಪ ಶಾಸಂ ಅವರ ಉಪಸ್ಥಿತಿಯಲ್ಲಿ ಕಲ್ಯಾಣ ಕರ್ನಾಟಕ ವಿಮೋಚನೆಯ ಹರಿಕಾರ ಸರದಾರ್ ವಲ್ಲಭಭಾಯಿ ಪಟೇಲ್, ಮಹಾತ್ಮ ಗಾಂಧೀಜಿ, ಮತ್ತು ಡಾ, ಬಿ.ಆರ್. ಅಂಬೇಡ್ಕರ್ ರವರ ಭಾವ ಚಿತ್ರಕ್ಕೆ ಪೂಜೆ ಪುಷ್ಪ ನಮನ ಸಲ್ಲಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಧ್ವಜಾರೋಹಣ ನೆರವೇರಿಸಿದರು.

ನಂತರ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ತಿರುಮಲರೆಡ್ಡಿ ಮಾತನಾಡಿ ಕರ್ನಾಟಕದ ಉಳಿದ ಎಲ್ಲಾ ಭಾಗಗಳಲ್ಲಿ ವರ್ಷಕ್ಕೆ ಒಂದು ಬಾರಿ ಸ್ವತಂತ್ರ ದಿನಾಚರಣೆ ಆಚರಿಸಿದರೆ ಕಲ್ಯಾಣ ಕರ್ನಾಟಕದ ಜನರು ಮಾತ್ರ ಎರಡು ಬಾರಿ ಸ್ವತಂತ್ರ ದಿನಾಚರಣೆಯನ್ನು ಆಚರಿಸುತ್ತಾರೆ. ಆಗಸ್ಟ್ 15 ರಂದು ಬ್ರಿಟಿಷರ ದಾಸ್ಯದಿಂದ ಹೊರ ಬಂದು ಸಂಭ್ರಮವಾದರೆ, ಸೆಪ್ಟೆಂಬರ್ 17 ನಿಜಾಮರ ಮತ್ತು ಜಕಾರ ದಬ್ಬಾಳಿಕೆಯಿಂದ ಹೊರ ಬಂದು ಭಾರತದ ಒಕ್ಕೂಟಕ್ಕೆ ಸೇರಿದ ಸುದಿನವನ್ನು ನೆನಪಿಸಿಕೊಳ್ಳಲಾಗುತ್ತದೆ ಎಂದರು.ಸಂಪೂರ್ಣ ಶ್ರೇಯೋ ಭಾರತದ ಪರ ಸೇರಿಕೊಳ್ಳಲು ರಜಾಕರ ವಿರುದ್ಧ ಹೋರಾಡಿ ಪ್ರಾಣಾರ್ಪಣೆ ಮಾಡಿದ ಎಲ್ಲಾ ಸ್ವತಂತ್ರ ಹೋರಾಟಗಾರರನ್ನು ಸ್ಮರಿಸಿದರು.

## ಹತ್ತಿ ಬೆಳೆ ಮಧ್ಯೆ ಬೆಳೆದ 8.12 ಲಕ್ಷ ಮೌಲ್ಯದ ಗಾಂಜಾ ಗಿಡಗಳ ಪತ್ತೆ

**ಔರಾದ್ ,ಸೆ.18–** ತಾಲ್ಲೂಕಿನ ಚಿಂತಾಕಿ ಪೊಲೀಸ್ ಠಾಣೆ ವ್ಯಾಪ್ತಿಯ ಕರಂಜಿ(ಬಿ) ಗ್ರಾಮದ ರೈತರೊಬ್ಬರು ಹೊಲದಲ್ಲಿ ಹತ್ತಿ ಬೆಳೆ ಮಧ್ಯೆ ಬೆಳೆದಿದ್ದ 8.12 ಲಕ್ಷ ಗಾಂಜಾವನ್ನು ಜಿಲ್ಲಾ ಪೊಲೀಸರು ಡ್ರೋನ್ ಕ್ಯಾಮೆರಾ ಮೂಲಕ ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ.ಹೊಲದಲ್ಲಿ ಬೆಳೆಗಳ ನಡುವೆ ಗಾಂಜಾ ಸಸಿ ನಾಟಿ ಮಾಡಿ ಬೆಳೆದರೆ ಯಾರಿಗೂ ಗೊತ್ತಾಗುವುದಿಲ್ಲ. ಕದ್ದು ಮುಚ್ಚಿ ಮಾರಾಟ ಮಾಡಬಹುದು ಎಂಬ ಉದ್ದೇಶದಿಂದ ರೈತರೊಬ್ಬರು ಅಕ್ರಮವಾಗಿ 46 ಗಾಂಜಾ ಗಿಡಗಳನ್ನು ಬೆಳೆದಿದ್ದರು.

ಖಚಿತ ಮಾಹಿತಿ ಮೇರೆಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಡಿಸಿಆರ್‌ಬಿ ಘಟಕ ಪಿಎಸ್‌ಐ ಅಂಬ್ರೀಶ್ ವಾಘಮೋರೆ, ಚಿಂತಾಕಿ ಠಾಣೆ ಪಿಎಸ್‌ಐ ಚಂದ್ರಶೇಖರ ನಿರ್ಣೆ ಅವರ ನೇತ್ರತ್ವದಲ್ಲಿ ಮಂಗಳವಾರ ಬೆಳಿಗ್ಗೆ ದಾಳಿ ನಡೆಸಿ, ಡ್ರೋನ್ ಕ್ಯಾಮರಾ ಬಳಸಿ ಗಾಂಜಾ ಗಿಡಗಳನ್ನು ಪತ್ತೆ ಹಚ್ಚಿದ್ದಾರೆ.

# ವಿಶ್ವಕರ್ಮರ ಹಾಕಿಕೊಟ್ಟ ಹಾದಿಯಲ್ಲಿ ನಡೆಯೋಣ: ಡಾ.ಅಮೃತಾ ಎಸ್ ಚೆನ್ನಾಳ

ಯುವ ಮಾರ್ಗ ಸುದ್ದಿ



**ರಾಯಚೂರು,ಸೆ.18–**ವಿಶ್ವಕರ್ಮರ ಸಾಧನೆ ಹಾಗೂ ಅವರು ಸಮಾಜಕ್ಕೆ ನೀಡಿದ ಕೊಡುಗೆ ಮಹತ್ವದ್ದಾಗಿದೆ. ಅವರು ಹಾಕಿಕೊಟ್ಟ ಹಾದಿಯಲ್ಲಿ ನಾವು ನೀವು ಮುನ್ನಡೆಯಬೇಕಿದೆ ಎಂದು ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸಹಾಯಕ ಪ್ರಾಧ್ಯಾಪಕರಾದ ಡಾ.ಅಮೃತಾ ಎಸ್. ಚೆನ್ನಾಳ ಅವರು ಹೇಳಿದರು.

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗ ಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಸೆ.17ರಂದು ಬುಧವಾರ ನಡೆದ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಅವರು ಮಾತನಾಡಿದರು.

ವಿಶ್ವಕರ್ಮ ಸಮಾಜದವರು ನಿರ್ಮಿಸಿದ ಶಿಲ್ಪಕಲೆಗಳು ಈಗಲೂ ಕಣ್ಮನ ಸೆಳೆಯುತ್ತವೆ. ಶಿಲ್ಪ ಕಲೆ ಮಾತ್ರ ಅಲ್ಲ, ಬಂಗಾರದ ಕುಸುರಿ, ಕಬ್ಬಿಣದ ಕೆಲಸಕ್ಕೂ ಇವರು ಎತ್ತಿದ ಕೈ. ಕೆಲಸದಲ್ಲಿ ಇವರಿಗೆ ಇರುವ ತನ್ಮಯತೆ ಸೂಕ್ಷ್ಮತೆ ಬೇರೆ ಯಾರಿಗೂ ಸಿದ್ಧಿಸದು. ಮೂರ್ತಿ ಕೆತ್ತುವಾಗ ತಲ್ಲೀನತೆ ಬಹಳ ಮುಖ್ಯ. ಸ್ವಲ್ಪ ಎಚ್ಚರ ತಪ್ಪಿದರೂ ಕಲಾಕೃತಿ ಓರೆ ಕೋರೆ ಆದೀತು. ಈ ಕಲಾವಂತಿಕೆಯು ವಿಶ್ವಕರ್ಮರಿಗೆ ದೊರೆತ ದೇವರ ಕೊಡುಗೆಯಾಗಿದೆ ಎಂದರು.

ವಿಶ್ವಕರ್ಮನು ಹಿಂದೂ ಪುರಾಣಗಳ ಪ್ರಕಾರ ಬ್ರಹ್ಮಾಂಡದ ಸೃಷ್ಟಿಕರ್ತ ಎಂದು ನಂಬಲಾಗಿದೆ. ಪುರಾತನ ಋಗ್ವೇದದಲ್ಲಿ ದೈವಿಕ ಕುಶಲಕರ್ಮಿಯಾಗಿ ಉಲ್ಲೇಖಿಸಲಾಗಿದ್ದು, ಇಂದ್ರಪ್ರಸ್ಥದ ಅರಮನೆ, ದ್ವಾರಕಾ ನಗರ ಮತ್ತು ದೇವತೆಗಳ ಆಯುಧಗಳಾದ ಸುದರ್ಶನ ಚಕ್ರ, ತ್ರಿಶೂಲ ಮುಂತಾದವುಗಳನ್ನು ನಿರ್ಮಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು. ಈ ಸಮಾಜದ ಮುಂದಿನ ಬೆಳವಣಿಗೆಗೆ ಮಹಿಳೆಯರ ಸಬಲೀಕರಣ ಅತ್ಯವಶ್ಯಕ. ಪುರುಷ–ಮಹಿಳೆಯರು ಸಮಾನರಾಗಿ ನಡೆಯಬೇಕು. ವಿಶ್ವಕರ್ಮ ಅವರ ಆದರ್ಶಗಳನ್ನು ಅನುಸರಿಸಿ ವಿದ್ಯೆ, ಶ್ರಮ, ಕೌಶಲ್ಯ ಮತ್ತು ಸಂಸ್ಕೃತಿ ಕಾಪಾಡಬೇಕು ಎಂದರು.

ಈ ವೇಳೆ ಸಮಾಜ ಮುಖಂಡರಾದ ರಾಮು ಅವರು ಮಾತನಾಡಿ, ಸತ್ಯ ನಿಷ್ಠೆಯನ್ನು ಪಾಲಿಸುವ ವಿಶ್ವಕರ್ಮ ಜನಾಂಗವು ಪ್ರತಿಭಾವಂತರಿಂದ ಕೂಡಿದೆ. ಮರ, ಕಬ್ಬಿಣ, ಚಿನ್ನ–ಬೆಳ್ಳಿ, ಕಂಚು–ಹಿತ್ತಾಳೆ, ಶಿಲಾಶಿಲ್ಪ ಮೊದಲಾದ ಪಂಚ ಕಸುಬುನಿರತರ ಮೂಲ ಪುರುಷ ವಿಶ್ವಕರ್ಮ. ಕುಶಲ ಕರ್ಮಿಗಳಿಗೆ ಸಾಲದ ನೆರವು ನೀಡುವ ಪ್ರಧಾನಿಮಂತ್ರಿ ವಿಶ್ವಕರ್ಮ ಯೋಜನೆಯನ್ನು ಕೇಂದ್ರ ಸರ್ಕಾರ ಜಾರಿಗೊಳಿಸಿದೆ. ತಮ್ಮ ಕೌಶಲ ಹಾಗೂ ಜೀವನೋಪಾಯವೃದ್ಧಿಗಾಗಿ ವಿಶ್ವಕರ್ಮರು ಇದರ ಸದುಪಯೋಗಪಡೆಯಬೇಕು ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಪರಶುರಾಮ, ಸಮಾಜದ ಮುಖಂಡರಾದ ಬ್ರಮ್ಮ ಗಣೇಶ, ಗಿರೀಶ್ ಆಚಾರಿ, ಡಾ.ವೆಂಕಟೇಶ ಅನ್ವರಿ, ಡಾ.ಮನೋಹರ ವೈ.ಪತ್ತಾರ, ಕಾಳಿಕಾದೇವಿ ದೇವಸ್ಥಾನದ ಸಮಿತಿಯ ಅಧ್ಯಕ್ಷರಾದ ಈಶ್ವರ ವಿಶ್ವಕರ್ಮ, ಬ್ರಹ್ಮಯ್ಯ ಉಟಕನೂರು, ಮಾರುತಿ ಬಡಿಗೇರ್, ಜಯಂತ್ ಆಚಾರಿ, ಈರಣ್ಣ ಬಡಿಗೇರ್ ಸೇರಿದಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿ ಇದ್ದರು.

# ರಾಂಪೂರ ಕೆರೆ ಅಭಿವೃದ್ಧಿ ಕಾಮಗಾರಿಗೆ ಸಚಿವರಿಂದ ಚಾಲನೆ



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.18–** ಸಣ್ಣ ನೀರಾವರಿ ಇಲಾಖೆಯಿಂದ ಸುಮಾರು 500 ಲಕ್ಷ ರೂ.ಗಳ ವೆಚ್ಚದಲ್ಲಿ ರಾಯಚೂರು ತಾಲೂಕಿನ ರಾಂಪೂರು ಕೆರೆ ಅಭಿವೃದ್ಧಿ ಕಾಮಗಾರಿಗೆ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಸೆ.17ರಂದು ಜಂಟಿಯಾಗಿ ಚಾಲನೆ ನೀಡಿದರು.

ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮದ ಬಳಿಕ ನೇರವಾಗಿ ಕೆರೆ ಪ್ರದೇಶಕ್ಕೆ ತೆರಳಿದ ಸಚಿವರು, ಪೂಜಾ ಕಾರ್ಯಕ್ರಮದ ನಂತರ ಭೂಮಿ ಪೂಜೆ ನೆರವೇರಿಸಿದರು.

ಸಣ್ಣ ನೀರಾವರಿ ಇಲಾಖೆಯ ಅನುದಾನದಲ್ಲಿ ರಾಂಪೂರು ಕೆರೆ ಅಭಿವೃದ್ಧಿ ನಡೆಯುತ್ತಿದ್ದು, ಕೆರೆ ಅಭಿವೃದ್ಧಿಗೊಂಡಲ್ಲಿ ಅಂತರ್ಜಲ ವೃದ್ಧಿ ಮತ್ತು ರಾಯಚೂರ ಜನತೆಗೆ ಕುಡಿಯುವ ನೀರು ಪೂರೈಕೆಗೆ ಸಹಕಾರಿಯಾಗಲಿ. ಕಾಮಗಾರಿಯು ಗುಣಮಟ್ಟದಿಂದ ನಡೆಯಬೇಕು ಎಂದು ಇದೆ ವೇಳೆ ಸಚಿವರು ಸಂಬಂಧಿಸಿದ ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಕುಮಾರಸ್ವಾಮಿ, ಪಾಲಿಕೆಯ ಸದಸ್ಯರಾರ ಜಯಣ್ಣ, ಜಿಂದಪ್ಪ ಹಾಗೂ ಮುಖಂಡರಾದ ಕೆ.ಶಾಂತಪ್ಪ, ನರಸಿಂಹಲು ಮಾಡಗಿರಿ ಸೇರಿದಂತೆ ಪಾಲಿಕೆಯ ವಿವಿಧ ವಿಭಾಗದ ಅಧಿಕಾರಿಗಳು, ಸಿಬ್ಬಂದಿ ಇದ್ದರು.

## ವಿಶ್ವಕರ್ಮ ಭಾವಚಿತ್ರ ಮೆರವಣಿಗೆಗೆ ಸಚಿವರಿಂದ ಚಾಲನೆ

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.18–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಸೆ.17ರಂದು ಹಮ್ಮಿಕೊಂಡಿದ್ದ ವಿಶ್ವಕರ್ಮ ಭಾವಚಿತ್ರ ಮೆರವಣಿಗೆಗೆ ನಗರದ ಮಂತ್ರಾಲಯ ರಸ್ತೆಯಲ್ಲಿನ ವಿಶ್ವಕರ್ಮ ವೃತ್ತದಲ್ಲಿ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಚಾಲನೆ ನೀಡಿದರು.

ಈ ವೇಳೆ ಮಹರ್ಷಿ ವಾಲ್ಮೀಕಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ರಾಯಚೂರು ಮಹಾನಗರ



ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಇದ್ದರು.

## ಅಲೆಮಾರಿ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

**ರಾಯಚೂರು,ಸೆ.18–** ಸಮಾಜ ಕಲ್ಯಾಣ ಇಲಾಖೆಯಿಂದ 2025–26ನೇ ಸಾಲಿನ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದಿಂದ ಸಮುದಾಯದ ಜನರಿಗೆ ಸೇವೆಗಳನ್ನು ಒದಗಿಸುವ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಗೆ ಸೆಪ್ಟೆಂಬರ್ 25ರವರೆಗೆ ಅವಧಿ ವಿಸ್ತರಿಸಲಾಗಿದೆ.

ನಿಗಮದಿಂದ ಸ್ವಯಂ ಉದ್ಯೋಗ–ನೇರ ಸಾಲ ಯೋಜನೆ, ಮೈಕ್ರೋ ಕ್ರೆಡಿಟ್ ಹಣಕಾಸು, ಸ್ವಯಂ ಉದ್ಯೋಗ, ಸ್ವಾವಲಂಬಿ ಸಾರಥಿ ಯೋಜನೆ, ಗಂಗಾ ಕಲ್ಯಾಣ ಯೋಜನೆ ಹಾಗೂ ಭೂ ಖರೀದಿ ಯೋಜನೆಗೆ ಸೇವಾ ಸಿಂಧು ಪೋರ್ಟಲ್ ನಲ್ಲಿ ಸೆ.25ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. 2023–24 ಹಾಗೂ 2024–25 ಹಾಗೂ 2025–26ನೇ ಸಾಲಿನ ಅರ್ಜಿಗಳನ್ನು ಪರಿಗಣಿಸಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಆಯ್ಕೆ ಸಮಿತಿಯಲ್ಲಿ ಫಲಾನುಭವಿಗಳ ಆಯ್ಕೆ ನಡೆಸುವುದು, ಆಯ್ಕೆಯಾದ ಫಲಾನುಭವಿಗಳ ಜಾತಿ, ಯೋಜನೆ ಮತ್ತು ಪೂರ್ಣ ವಿಳಾಸದೊಂದಿಗೆ ಪಟ್ಟಿ ಸಿದ್ದಪಡಿಸಿ ಆಯ್ಕೆ ಮಾಡಿರುವ ಫಲಾನುಭವಿಗಳನ್ನು ಮತ್ತೊಮ್ಮೆ ಆಯ್ಕೆ ಮಾಡಲು ಸಾಧ್ಯವಿರುವುದಿಲ್ಲ. ಸೌಲಭ್ಯ ವಂಚಿತರಿಗೆ ಮೊದಲ ಆದ್ಯತೆ ನೀಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಕಚೇರಿಯನ್ನು ಕಚೇರಿಯ ವೇಳೆಯಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತರಬೇತಿ ಸಂಸ್ಥೆಗಳಲ್ಲಿ ವಿವಿಧ ವೃತ್ತಿಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹಾನ

**ರಾಯಚೂರು,ಸೆ.18–** ರಾಯಚೂರು ಹಾಗೂ ದೇವದುರ್ಗ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ವಿವಿಧ ವೃತ್ತಿಗಳಿಗೆ 2025–26ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಎಸ್.ಎಸ್.ಎಲ್.ಸಿ ಉತ್ತೀರ್ಣರಾದ ಆಸಕ್ತ ವಿದ್ಯಾರ್ಥಿಗಳು, ಅಂಕಪಟ್ಟಿ, ಇತ್ತೀಚಿನ 2 ಭಾವಚಿತ್ರ, ಜಾತಿ ಹಾಗೂ ಆದಾಯ ಪ್ರಮಾಣ, 371 ಜೆ ಪ್ರಮಾಣ ಪತ್ರ, ಗ್ರಾಮೀಣ ಮತ್ತು ವ್ಯಾಸಂಗ ಪ್ರಮಾಣ ಪತ್ರಗಳೊಂದಿಗೆ ನೇರವಾಗಿ ಸಂಸ್ಥೆಯಲ್ಲಿ ಅರ್ಜಿಯನ್ನು ಸೆಪ್ಟೆಂಬರ್ 30ರೊಳಗಾಗಿ ಸಲ್ಲಿಸಿ ಪ್ರವೇಶ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ರಾಯಚೂರು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಮೊಬೈಲ್ ಸಂಖ್ಯೆ: 9036684778, 9449185499, ದೇವದುರ್ಗ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಮೊಬೈಲ್ ಸಂಖ್ಯೆ: 9740671796, 7676126770, 9731494209, 9113519543ಗೆ ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಹಾಗೂ ದೇವದುರ್ಗ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆಪ್ಟೆಂಬರ್ 20ರಂದು ಜೆಸ್ಕಾಂ ಗ್ರಾಹಕರ ಸಂವಾದ ಸಭೆ

**ರಾಯಚೂರು,ಸೆ.18–**ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1ರ ಕಚೇರಿಯಲ್ಲಿ ಸೆಪ್ಟೆಂಬರ್ 20ರ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆವರೆಗೆ ಗ್ರಾಹಕರ ಸಂವಾದ ಸಭೆ ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಭಾಗವಹಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹುಮನಾಬಾದ್ ನಲ್ಲಿ ಸಂಭ್ರಮದ ಕಲ್ಯಾಣ ಕರ್ನಾಟಕ ಉತ್ಸವ

**ಹುಮನಾಬಾದ್:ಸೆ.18–** ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮವನ್ನು 2026ರಲ್ಲಿ ನಗರದಲ್ಲಿ ತಾಲ್ಲೂಕು ಆಡಳಿತದಿಂದ ಮಿನಿವಿಧಾನ ಸೌಧ ಪ್ರಾಂಗಣದಲ್ಲಿ ನಡೆಸುವ ಬದಲಿಗೆ ವಲ್ಲಭಭಾಯಿ ಪಟೇಲ ವೃತ್ತದಲ್ಲಿಯೇ ಕಾರ್ಯಕ್ರಮ ಯೋಜನೆ ರೂಪಿಸುವಂತೆ ಶಾಸಕ ಡಾ.ಸಿದ್ದು ಪಾಟೀಲ ತಹಶೀಲ್ದಾರ್ ಅವರಿಗೆ ಸಲಹೆ ನೀಡಿದರು.ಕಲ್ಯಾಣ ಕರ್ನಾಟಕ ದಿನಾಚರಣೆ ಅಂಗವಾಗಿ ಪಟೇಲ ವೃತ್ತದಲ್ಲಿ ಬುಧವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಇಡೀ ದೇಶ ಸ್ವಾತಂತ್ರ್ಯವಾದರೂ ಕ.ಕ ಭಾಗದ ಜಿಲ್ಲೆಗಳು ಮಾತ್ರ ಹೈದರಾಬಾದ್ ನಿಜಾಮನ ವಶದಲ್ಲಿದ್ದವು.ಈ ಭಾಗದ ರಾಮಚಂದ್ರ ವೀರಪ್ಪ ಸೇರಿದಂತೆ ಅಸಂಖ್ಯಾತ ರಾಷ್ಟ್ರ ಪ್ರೇಮಿಗಳು ಹೋರಾಡಿದ್ದಾರೆ ಎಂದರು.ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ ಮಾತನಾಡಿ, ಮುಂದಿನ ವರ್ಷ ಸರ್ದಾರ ಪಟೇಲ ವೃತ್ತದಲ್ಲಿ ಕಾರ್ಯಕ್ರಮವನ್ನು ಆಯೋಜಿಸಬೇಕೆಂಬ ಶಾಸಕರ ಸಲಹೆಗೆ ನನ್ನ ಸಹಮತವಿದೆ. ಅದೊಂದು ವಿಶಿಷ್ಟ ಹಾಗೂ ಇಡೀ ಜಿಲ್ಲೆಗೆ ಮಾದರಿ ಆಗಬೇಕು ಎಂದರು.

ಅಂಬೇಡ್ಕನಿಗಮ ಮಾಜಿ ಸದಸ್ಯ ಬಸವರಾಜ ಆರ್ಯ ಮಾತನಾ ಡಿದರು. ತಹಸೀಲ್ದಾರ್ ಅಂಜುತಬಸುಮ್, ಪುರಸಭೆಅಧ್ಯಕ್ಷೆಪಾ ರ್ವತಿಮಡಿವಾಳಪ್ಪಾ,ಉಪಾಧ್ಯಕ್ಷಮುಕರಂಜಾ, ತಾಲೂಕು ಅಧಿಕಾರಿದೀಪಿಕಾನಾಯಕರ್, ಸದಸ್ಯ ಅಪ್ಪರಮಿಯ್ಯ, ಧನಲಕ್ಷ್ಮೀ ಗೂಡಕೆ, ಓಂಪ್ರಕಾಶ ಅಗಡಿ, ಶಿವಲಿಂಗಯ್ಯ ಅಂದೆನಮಠ, ಸೇರಿದಂತೆ ಅನೇಕರು ಇದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H